# ಪ್ರವಾದಿ ಜೆಕರ್ಯನ ಗ್ರಂಥ

## ಮುನ್ನುಡಿ

ಪ್ರವಾದಿ ಜೆಕರ್ಯನ ಗ್ರಂಥವನ್ನು ಒಂದನೇ ಅಧ್ಯಾಯದಿಂದ 8ನೇ ಅಧ್ಯಾಯದವರೆಗೆ ಮೊದಲನೇ ಭಾಗವಾಗಿಯೂ, ಒಂಭತ್ತನೇ ಅಧ್ಯಾಯದಿಂದ 14ನೇ ಅಧ್ಯಾಯದವರೆಗೆ ಎರಡನೇ ಭಾಗವಾಗಿಯೂ ವಿಂಗಡಿಸಬಹುದು. ಮೊದಲನೇ ಭಾಗ ರಚಿತವಾದದ್ದು ಕ್ರಿ.ಪೂ. 520ರಿಂದ 518ರೊಳಗೆ; ದರ್ಶನಗಳು, ಜೆರುಸಲೇಮಿನ ಪುನಃಸ್ಥಾಪನೆ, ಮಹಾದೇವಾಲಯದ ಪುನಃನಿರ್ಮಾಣ, ದೇವಜನರ ಶುದ್ಧೀಕರಣ, ಲೋಕರಕ್ಷಕನ ಆಗಮನ – ಈ ವಿಷಯಗಳು ಮೊದಲನೇ ಭಾಗದಲ್ಲಿ ಅಡಗಿವೆ. ಎರಡನೇ ಭಾಗದಲ್ಲಿ, ಬರಲಿರುವ ಲೋಕೋದ್ಧಾರಕನನ್ನು ಕುರಿತ ಸಂದೇಶವಿದೆ. ಲೋಕೋದ್ಧಾರಕನ ವಿಷಯ ಇತರ ಪ್ರವಾದನಾ ಗ್ರಂಥಗಳಲ್ಲೂ ಕಂಡುಬರುತ್ತದೆ. ಆದರೆ ಆತ ದೀನ ಹಾಗೂ ನಮ್ರಸ್ವಭಾವವುಳ್ಳವನು (9.9) ಎಂಬ ಅಂಶ ಇದರಲ್ಲಿ ವಿಶಿಷ್ಟವಾದುದು. ಅಂತೆಯೇ ಅಂತಿಮ ನ್ಯಾಯತೀರ್ಪು ಸಹ ಈ ಭಾಗದ ಮುಖ್ಯಾಂಶವೆನ್ನಬಹುದು.

## ಪರಿವಿಡಿ


| | | | | | |
|---|---|---|---|---|---|
| 1. ಎಚ್ಚರಿಕೆ ಹಾಗೂ ನಿರೀಕ್ಷೆಯ ಸಂದೇಶ | – | 1.1 | – | 8.23 |
| 2. ನೆರೆರಾಷ್ಟ್ರಗಳಿಗೆ ನ್ಯಾಯ ತೀರ್ಪು | – | 9.1 | – | 9.8 |
| 3. ಬರಲಿರುವ ಶಾಂತಿ ಸಮೃದ್ಧಿ | – | 9.9 | – | 14.21 |


### ದೇವಜನರು ಹಿಂದಿರುಗಬೇಕೆಂದು ಕರೆ

**1** ಡೇರಿಯಸನ ಆಳ್ವಿಕೆಯ ಎರಡನೆಯ ವರ್ಷದ ಎಂಟನೆಯ ತಿಂಗಳಲ್ಲಿ ಸರ್ವೇಶ್ವರನಿಂದ ಇದ್ದೋವಿನ
ಮೊಮ್ಮಗನೂ ಬೆರೆಕ್ಯನ ಮಗನೂ ಆದ ಜೆಕರ್ಯನೆಂಬ ಪ್ರವಾದಿಗೆ ಕೇಳಿಬಂದ ದೈವವಾಣಿಯಿದು:
2ಸರ್ವೇಶ್ವರ ನಿಮ್ಮ ಪಿತೃಗಳ ಮೇಲೆ ಬಹಳ ಸಿಟ್ಟುಗೊಂಡಿದ್ದಾರೆ. 3ಎಂದೇ ನೀನು ನನ್ನ ಜನರಿಗೆ ಹೀಗೆಂದು
ಹೇಳು: "ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: ಮರಳಿ ನನಗೆ ಅಭಿಮುಖರಾಗಿರಿ. ಆಗ ನಾನು ನಿಮಗೆ
ಮರಳಿ ಅಭಿಮುಖನಾಗುವೆನು. 4ನಿಮ್ಮ ಪಿತೃಗಳಂತೆ ಆಗಬೇಡಿ. ಅವರಿಗೆ ಪೂರ್ವಕಾಲದ ಪ್ರವಾದಿಗಳು,
'ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: ನಿಮ್ಮ ದುರ್ಮಾರ್ಗಗಳನ್ನೂ ದುಷ್ಕೃತ್ಯಗಳನ್ನೂ ಬಿಟ್ಟು
ಹಿಂದಿರುಗಿ' ಎಂದು ಸಾರಿದರು. ಆದರೂ ಅವರು ನನ್ನ ಮಾತನ್ನು ಕಿವಿಗೊಟ್ಟು ಕೇಳಲಿಲ್ಲ. 5ನಿಮ್ಮ ಪಿತೃಗಳು
ಈಗಲೂ ಇದ್ದಾರೆಯೇ? ಪ್ರವಾದಿಗಳು ಸದಾಕಾಲ ಇರುವರೆ? 6ಆದರೂ ನನ್ನ ದಾಸರಾದ ಪ್ರವಾದಿಗಳಿಗೆ
ನಾನು ಕೊಟ್ಟ ಆಜ್ಞೆಗಳು, ವಿಧಿನಿಯಮಗಳು ನಿಮ್ಮ ಪಿತೃಗಳ ಮರಣದ ನಂತರವೂ ಶಾಶ್ವತವಾಗಿ
ಉಳಿದಿವೆಯಲ್ಲವೆ? ಅವರು ಪಶ್ಚಾತ್ತಾಪಪಟ್ಟು, 'ಸೇನಾಧೀಶ್ವರ ಸರ್ವೇಶ್ವರ ನಮ್ಮ ದುರ್ಮಾರ್ಗ ಹಾಗೂ
ದುಷ್ಕೃತ್ಯಗಳಿಗೆ ತಕ್ಕಂತೆ ಏನು ಮಾಡಬೇಕೆಂದು ಸಂಕಲ್ಪಿಸಿದ್ದರೋ, ಅದನ್ನು ನಮಗೆ ಮಾಡಿಯೇ
ಮಾಡಿದ್ದಾರೆ' ಎಂದು ಹೇಳಿಕೊಂಡರಲ್ಲವೆ?"

### ಅಶ್ವಗಳ ದರ್ಶನ

7 ಡೇರಿಯಸನ ಆಳ್ವಿಕೆಯ ಎರಡನೇ ವರ್ಷದ ಹನ್ನೊಂದನೆಯ ತಿಂಗಳಿನ (ಅಂದರೆ ಶೆಬಾತ್
ತಿಂಗಳಿನ) ಇಪ್ಪತ್ತನಾಲ್ಕನೇ ದಿನದಲ್ಲಿ ಇದ್ದೋವಿನ ಮೊಮ್ಮಗನೂ ಬೆರೆಕ್ಯನ ಮಗನೂ ಆದ ಜೆಕರ್ಯನೆಂಬ
ಪ್ರವಾದಿಗೆ ಸರ್ವೇಶ್ವರ ಕೊಟ್ಟ ದರ್ಶನವಿದು:

8 ರಾತ್ರಿಯಲ್ಲಿ ನನಗೆ ಈ ದರ್ಶನವಾಯಿತು. ಇಗೋ, ಕೆಂಪು ಕುದುರೆಯನ್ನೇರಿದ್ದ ಒಬ್ಬ ವ್ಯಕ್ತಿ ತಗ್ಗಿನಲ್ಲಿರುವ ಸುಗಂಧ ವೃಕ್ಷಗಳ ನಡುವೆ ನಿಂತಿದ್ದಾನೆ. ಅವನ ಹಿಂದೆ ಕೆಂಪು, ನಸುಗೆಂಪು ಮತ್ತು ಬಿಳಿಯ ಕುದುರೆಗಳಿವೆ. 9ನಾನು, 'ಸ್ವಾಮೀ, ಇದೆಲ್ಲ ಏನು?' ಎಂದು ಕೇಳಿದೆ. ಅದಕ್ಕೆ ಸೂತ್ರಧಾರಿಯಾದ ದೂತನು ನನ್ನೊಡನೆ ಮಾತನಾಡುತ್ತಾ 'ಇದು ಏನನ್ನು ಸೂಚಿಸುತ್ತದೆಂಬುದನ್ನು ನಿನಗೆ ತೋರಿಸುತ್ತೇನೆ' ಎಂದು ಹೇಳಿದ.

10 ಕೂಡಲೆ ಸುಗಂಧ ವೃಕ್ಷಗಳ ನಡುವೆ ಇದ್ದವನು: "ಇವರು ಲೋಕದ ವೀಕ್ಷಣಾರ್ಥವಾಗಿ ದೇವರಿಂದ ಕಳುಹಿಸಲ್ಪಟ್ಟವರು" ಎಂದು ಉತ್ತರಕೊಟ್ಟ.

11 ಆಗ ಅವರು ವೃಕ್ಷಗಳ ನಡುವೆ ನಿಂತಿದ್ದ ದೇವದೂತನಿಗೆ, "ನಾವು ಲೋಕವನ್ನೆಲ್ಲ ವೀಕ್ಷಿಸಿ ಬಂದಿದ್ದೇವೆ. ಅದು ನಿಶ್ಚಿಂತೆಯಿಂದ ನೆಮ್ಮದಿಯಾಗಿದೆ," ಎಂದು ವರದಿ ಮಾಡಿದರು.

12 ಆಗ ದೇವದೂತನು: "ಸೇನಾಧೀಶ್ವರ ಸರ್ವೇಶ್ವರಾ, ಕಳೆದ ಎಪ್ಪತ್ತು ವರ್ಷಗಳಿಂದ ನೀವು ಕೋಪದಿಂದಿರುವಿರಿ, ಏಕೆ? ಇನ್ನೆಷ್ಟು ಕಾಲ ಜೆರುಸಲೇಮಿಗೂ ಜುದೇಯದ ಇತರ ಪಟ್ಟಣಗಳಿಗೂ ಕರುಣೆ ತೋರಿಸದೆ ಇರುವಿರಿ?" ಎಂದು ಕೇಳಿದ.

13 ಆಗ ಸೂತ್ರಧಾರಿಯಾದ ದೂತನಿಗೆ ಸರ್ವೇಶ್ವರ ಕರುಣೆಯಿಂದ ಸದುತ್ತರ ಕೊಟ್ಟರು. 14ಮತ್ತು
ಆ ದೂತ ಹೀಗೆಂದು ನನಗೆ ಅಪ್ಪಣೆ ಮಾಡಿದ: "ಇದನ್ನು ನೀನು ಸಾರಿ ಹೇಳಬೇಕು. ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ – ಜೆರುಸಲೇಮಿನ ಹಾಗೂ ಸಿಯೋನಿನ ಮೇಲೆ ನನಗೆ ತುಂಬ ಅಭಿಮಾನವಿದೆ.
15ನೆಮ್ಮದಿಯಿಂದ ಬಾಳುವ ರಾಷ್ಟ್ರಗಳ ಮೇಲೆ ಬಹಳ ಸಿಟ್ಟುಗೊಂಡಿದ್ದೇನೆ. ಏಕೆಂದರೆ, ನಾನು ಜೆರುಸಲೇಮಿನ ವಿರುದ್ಧ ಕಿಂಚಿತ್ತೇ ಕೋಪಗೊಂಡಿದ್ದಾಗ ಅವರು ಕೇಡಿಗೆ ಕೇಡು ಕೂಡಿಸಿಬಿಟ್ಟರು.
16ಆದುದರಿಂದ ನಾನು ಕರುಣಾಮಯನಾಗಿ ಜೆರುಸಲೇಮಿಗೆ ಹಿಂದಿರುಗಿ ಬಂದಿದ್ದೇನೆ. ಅಲ್ಲಿ ನನ್ನ ಆಲಯವನ್ನು ಮರಳಿ ಕಟ್ಟಲಾಗುವುದು. ಜೆರುಸಲೇಮ್ ನಗರವನ್ನು ವಾಸ್ತುಶಿಲ್ಪಕ್ಕೆ ತಕ್ಕಂತೆ ನಿರ್ಮಿಸಲಾಗುವುದು. ಇದು ಸೇನಾಧೀಶ್ವರ ಸರ್ವೇಶ್ವರನ ನುಡಿ."

17 "ಮತ್ತೊಮ್ಮೆ ನೀನು ಹೀಗೆಂದು ಘೋಷಿಸು: 'ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ. ಇನ್ನು ನನ್ನ ಪಟ್ಟಣದಲ್ಲಿ ಸಿರಿ ಸಂಪತ್ತು ತುಂಬಿತುಳುಕುವುದು. ಸರ್ವೇಶ್ವರ ಸಿಯೋನನ್ನು ಪುನಃ ಸಂತೈಸುವರು. ಜೆರುಸಲೇಮ್ ನಗರವನ್ನು ಪುನಃ ತನ್ನದಾಗಿ ಆರಿಸಿಕೊಳ್ಳುವರು'."

## ಕೊಂಬುಗಳ ದರ್ಶನ

18 ಮತ್ತೊಂದು ದರ್ಶನದಲ್ಲಿ ನಾನು ನಾಲ್ಕು ಕೊಂಬುಗಳನ್ನು ಕಂಡೆನು. 19"ಈ ಕೊಂಬುಗಳು ಏನನ್ನು ಸೂಚಿಸುತ್ತವೆ?" ಎಂದು ನಾನು ಕೇಳಿದಾಗ ಸೂತ್ರಧಾರಿಯಾದ ದೂತನು: 'ಇವು ಜೂದ, ಇಸ್ರಯೇಲ್, ಮತ್ತು ಜೆರುಸಲೇಮಿನ ಪ್ರಜೆಗಳನ್ನು ಚದರಿಸಿಬಿಟ್ಟ ಕೊಂಬುಗಳು,' ಎಂದನು.

20 ಅನಂತರ ಸರ್ವೇಶ್ವರ ನನಗೆ ನಾಲ್ಕು ಮಂದಿ ಸುತ್ತಿಗೆ ಹಿಡಿದವರನ್ನು ತೋರಿಸಿದರು. "ಇವರು ಏನು ಮಾಡುವುದಕ್ಕೆ ಬಂದಿದ್ದಾರೆ?" ಎಂದು ಕೇಳಿದಾಗ ಆತ: ಯೆಹೂದ್ಯರಲ್ಲಿ ಯಾರೂ ತಲೆಯೆತ್ತದಂತೆ ಅವುಗಳನ್ನು ಚದರಿಸುವ ಕೊಂಬುಗಳು ಅವು. ಇವರಾದರೆ ಜುದೇಯ ನಾಡನ್ನು ಚದರಿಸಬೇಕೆಂದು ತಲೆಯೆತ್ತಿದ ರಾಷ್ಟ್ರಗಳನ್ನೆ ಚದರಿಸಿ ಅವರ ಕೊಂಬುಗಳನ್ನು ಹೊಡೆದು ಕೆಡುವುದಕ್ಕೆ ಬಂದಿದ್ದಾರೆ" ಎಂದು ಹೇಳಿದರು.

## ಅಳತೆನೂಲಿನ ದರ್ಶನ

**2** ನನಗೆ ಮತ್ತೊಂದು ದರ್ಶನವಾಯಿತು. ಕೈಯಲ್ಲಿ ಅಳತೆನೂಲನ್ನು ಹಿಡಿದುಕೊಂಡಿದ್ದ ಒಬ್ಬನು ಕಾಣಿಸಿಕೊಂಡ. 2"ಎಲ್ಲಿಗೆ ಹೋಗುತ್ತಿರುವೆ?" ಎಂದು ನಾನು ಅವನನ್ನು ಕೇಳಿದಾಗ, ಅವನು: "ಜೆರುಸಲೇಮಿನ ಉದ್ದ–ಅಗಲ ಎಷ್ಟಿದೆಯೆಂದು ಅಳೆಯಲು ಹೋಗುತ್ತಿದ್ದೇನೆ," ಎಂದು ಉತ್ತರಕೊಟ್ಟನು.

3 ಆಗ ಸೂತ್ರಧಾರಿಯಾದ ದೂತನು ಮುಂದೆ ಬರುತ್ತಿರಲು, ಇನ್ನೊಬ್ಬ ದೂತನು ಆತನನ್ನು
ಎದುರುಗೊಂಡು, 4“ಅಳೆಯಲು ಹೋಗುತ್ತಿರುವ ಆ ಯುವಕನಿಗೆ ಓಡಿಹೋಗಿ ಈ ಮಾತನ್ನು ತಿಳಿಸು:
‘ಜೆರುಸಲೇಮಿನಲ್ಲಿ ಜನರ ಮತ್ತು ದನಕರುಗಳ ಸಂಖ್ಯೆ ಅಪಾರವಾಗುವುದು. ಅದು ಪೌಳಿಗೋಡೆಗಳಿಲ್ಲದ
ಊರುಕೇರಿಗಳಂತೆ ಹರಡಿಕೊಳ್ಳುವುದು. 5ನಾನೇ ಅದರ ಸುತ್ತಮುತ್ತಲು ಅಗ್ನಿ ಪ್ರಾಕಾರವಾಗಿ, ಅದರೊಳಗಿನ
ವೈಭವವಾಗಿರುವೆನು. ಇದು ಸರ್ವೇಶ್ವರಸ್ವಾಮಿಯ ನುಡಿ,’ ಎಂದ.”

## ಸೆರೆಹೋದವರಿಗೆ ಮರಳಿ ಬರಲು ಕರೆ

6–7 ಸರ್ವೇಶ್ವರ ತಮ್ಮ ಜನರಿಗೆ ಇಂತೆನ್ನುತ್ತಾರೆ: “ಚತುರ್ದಿಕ್ಕುಗಳಿಗೆ ನಿಮ್ಮನ್ನು ಚದರಿಸಿದವನು
ನಾನೇ. ಆದರೆ ಈಗ ಎಚ್ಚೆತ್ತುಕೊಳ್ಳಿ, ಹೊರನಾಡುಗಳಿಂದ ಓಡಿಬನ್ನಿ, ಇದು ಸರ್ವೇಶ್ವರನ ನುಡಿ.
ಬಾಬಿಲೋನಿಗೆ ಸೆರೆಹೋದ ಸಿಯೋನಿನವರೇ, ಅಲ್ಲಿಂದ ತಪ್ಪಿಸಿಕೊಂಡು ಬನ್ನಿ. 8ತಮ್ಮ ಮಹಿಮೆಯನ್ನು
ತಿಳಿಸುವುದಕ್ಕಾಗಿ ನನ್ನನ್ನು ಕಳುಹಿಸಿದ ಸೇನಾಧೀಶ್ವರ ಸರ್ವೇಶ್ವರ ನಿಮ್ಮನ್ನು ಸೂರೆಮಾಡಿದ ರಾಷ್ಟ್ರಗಳಿಗೆ
ಕೊಡುವ ಎಚ್ಚರಿಕೆ ಇದು: 9‘ನಿಮ್ಮನ್ನು ಮುಟ್ಟುವವರು ನನ್ನ ಕಣ್ಮಣಿಯನ್ನೇ ಮುಟ್ಟಿದಂತೆ! ಇಗೋ, ನಾನು
ಅವರ ಮೇಲೆ ಕೈಯೆತ್ತುವೆನು. ಅವರು ತಮ್ಮ ದಾಸರ ಕೈಯಿಂದಲೇ ಸೂರೆಯಾಗುವರು. ನನ್ನನ್ನು
ಕಳುಹಿಸಿದವರು ಸೇನಾಧೀಶ್ವರ ಸರ್ವೇಶ್ವರ ಎಂಬುದು ಆಗ ನಿಮಗೆ ಗೊತ್ತಾಗುವುದು’.”

10 ಸರ್ವೇಶ್ವರ ಇಂತೆನ್ನುತ್ತಾರೆ: “ಎಲೈ ಸಿಯೋನ್ ನಗರವೇ ಸಂತೋಷಪಡು, ಜಯಕಾರ ಮಾಡು;
ಇಗೋ, ನಾನೇ ಬಂದು ನಿನ್ನ ಮಧ್ಯೆ ವಾಸಿಸುವೆನು!”

11 ಆ ದಿನದಂದು ಹಲವಾರು ರಾಷ್ಟ್ರಗಳು ಸರ್ವೇಶ್ವರ ಸ್ವಾಮಿಯನ್ನು ಆಶ್ರಯಿಸಿಕೊಳ್ಳುವರು. ಅವರು
ಆ ಸ್ವಾಮಿಯ ಜನರಾಗುವರು. ಸ್ವಾಮಿ ಅವರ ಮಧ್ಯೆ ವಾಸಿಸುವರು. ಸೇನಾಧೀಶ್ವರರಾದ ಆ ಸ್ವಾಮಿಯೇ
ನನ್ನನ್ನು ನಿಮ್ಮ ಬಳಿಗೆ ಕಳುಹಿಸಿದ್ದಾರೆ ಎಂಬುದು ಆಗ ನಿಮಗೆ ಗೊತ್ತಾಗುವುದು. ಪವಿತ್ರ ಭೂಮಿಯಲ್ಲಿ
ಜುದೇಯ ನಾಡನ್ನು ಸ್ವಾಮಿ ತಮ್ಮ ಸೊತ್ತಾಗಿ ಮಾಡಿಕೊಳ್ಳುವರು. ಜೆರುಸಲೇಮನ್ನು ತಮಗಾಗಿ ಮರಳಿ
ಆರಿಸಿಕೊಳ್ಳುವರು.

12 ಸರ್ವೇಶ್ವರ ತಮ್ಮ ಪರಿಶುದ್ಧಾಲಯದಿಂದ ಹೊರಬರುತ್ತಿದ್ದಾರೆ. ನರಮಾನವರೇ, ಅವರ
ಶ್ರೀಸನ್ನಿಧಿಯಲ್ಲಿ ನೀವೆಲ್ಲರು ಮೌನತಾಳಿರಿ.

## ಪ್ರಧಾನ ಯಾಜಕನ ದರ್ಶನ

**3** ಮತ್ತೊಂದು ದರ್ಶನದಲ್ಲಿ ಪ್ರಧಾನ ಯಾಜಕನಾದ ಯೆಹೋಶುವನು ದೂತನ ಮುಂದೆ
ನಿಂತಿರುವುದನ್ನು ಸರ್ವೇಶ್ವರ ನನಗೆ ತೋರಿಸಿದರು. ಯೆಹೋಶುವನಿಗೆ ಪ್ರತಿವಾದಿಯಾಗಿ ಸೈತಾನನು ಅವನ
ಪಕ್ಕದಲ್ಲಿ ನಿಂತಿದ್ದ. 2ಆಗ ಸರ್ವೇಶ್ವರಸ್ವಾಮಿಯ ದೂತನು ಸೈತಾನನಿಗೆ: “ಸೈತಾನನೇ, ಸರ್ವೇಶ್ವರ ನಿನ್ನನ್ನು
ಖಂಡಿಸಲಿ, ಜೆರುಸಲೇಮನ್ನು ಆರಿಸಿಕೊಂಡ ಸರ್ವೇಶ್ವರ ನಿನ್ನನ್ನು ಖಂಡಿಸಲಿ, ಈತ ಒಲೆಯಿಂದ ಹಿರಿದ
ಬೆಂಕಿಕೊಳ್ಳಿ” ಎಂದನು.

3 ದೇವದೂತನ ಮುಂದೆ ನಿಂತಿದ್ದ ಯೆಹೋಶುವನು ಮಲಿನವಾದ ಬಟ್ಟೆಯನ್ನು ಧರಿಸಿದ್ದನು.
4ತನ್ನ ಮುಂದೆ ನಿಂತಿದ್ದ ಸೇವಕರಿಗೆ ಆ ದೂತನು, “ಈತನ ಮಲಿನವಾದ ಬಟ್ಟೆಗಳನ್ನು ತೆಗೆದು ಬಿಡಿ,”
ಎಂದನು. ಅನಂತರ ಯೆಹೋಶುವನಿಗೆ, “ನಿನ್ನ ದೋಷವನ್ನು ತೊಲಗಿಸಿದ್ದೇನೆ. ಶ್ರೇಷ್ಠವಾದ ಬಟ್ಟೆಗಳನ್ನು
ನಿನಗೆ ತೊಡಿಸುವೆನು,” ಎಂದನು.

5 “ಇವನ ತಲೆಗೆ ಶುಭ್ರವಾದ ಪೇಟವನ್ನು ಸುತ್ತಿರಿ,” ಎಂದು ಆ ದೂತನು ಅಪ್ಪಣೆ ಮಾಡಲು,
ಸೇವಕರು ಯೆಹೋಶುವನ ತಲೆಗೆ ಪೇಟವನ್ನು ಸುತ್ತಿ ಶುಭ್ರ ವಸ್ತ್ರಗಳನ್ನು ತೊಡಿಸಿದರು. ದೇವದೂತನು
ಅಲ್ಲಿಯೇ ನಿಂತಿದ್ದನು.

6 ಬಳಿಕ ದೇವದೂತನು ಯೆಹೋಶುವನಿಗೆ ಈ ಆಶ್ವಾಸನೆಯನ್ನು ಕೊಟ್ಟನು: 7“ಸೇನಾಧೀಶ್ವರ
ಸರ್ವೇಶ್ವರ ಇಂತೆನ್ನುತ್ತಾರೆ: ನೀನು ನನ್ನ ಮಾರ್ಗದಲ್ಲಿ ನಡೆದು, ನಾನು ನಿನಗೆ ವಹಿಸಿದ ಕಾರ್ಯವನ್ನು

ನೆರವೇರಿಸಿದರೆ, ನನ್ನ ಆಲಯದ ಮುಖ್ಯಾಧಿಕಾರಿಯಾಗುವೆ. ಅದರ ವ್ಯಾಪ್ತಿಯಲ್ಲಿ ಉಳ್ಳ ಎಲ್ಲದಕ್ಕೂ ವ್ಯವಸ್ಥಾಪಕನಾಗುವೆ. ಈ ಸನ್ನಿಧಾನದ ದೂತರ ಮಧ್ಯೆ ಬಂದು ಹೋಗುವ ಹಕ್ಕನ್ನು ನಿನಗೆ ಕೊಡುವೆನು. 8ಪ್ರಧಾನ ಯಾಜಕನಾದ ಯೆಹೋಶುವನೇ, ನೀನೂ ಮತ್ತು ನಿನ್ನ ಜೊತೆಯಲ್ಲಿ ಉಪಸ್ಥಿತರಾದ ಸಹಯಾಜಕರೂ, ಕೇಳಲಿ: ನೀವು ಶುಭದಿನಗಳ ಮುಂಗುರುತು. 'ಮೊಳಕೆ' ಎಂಬ ಸೇವಕನೊಬ್ಬನು ಕಾಣಿಸಿಕೊಳ್ಳುವಂತೆ ಮಾಡುವೆನು. 9ನಾನು ಯೆಹೋಶುವನ ಮುಂದೆ ಇಟ್ಟಿರುವ ಕಲ್ಲನ್ನು ನೋಡಿ. ಆ ಒಂದೇ ಕಲ್ಲಿನಲ್ಲಿ ಏಳು ಮುಖಗಳು ಇರುವ ಒಂದು ಕೆತ್ತನೆಯನ್ನು ಕೆತ್ತುವೆನು. ಒಂದೇ ದಿನದಲ್ಲಿ ಈ ನಾಡಿನ ಪಾಪವನ್ನು ತೊಡೆದು ಹಾಕುವೆನು. 10ಆ ದಿನದಂದು ನೀವೆಲ್ಲರೂ ನಿಮ್ಮ ನಿಮ್ಮ ನೆರೆಹೊರೆಯವರನ್ನು ದ್ರಾಕ್ಷಾಲತೆಗಳ ಹಾಗೂ ಅಂಜೂರದ ಗಿಡಗಳ ನೆರಳಿನಲ್ಲಿ ಸಮಾಧಾನದಿಂದ ವಿಶ್ರಮಿಸಲು ಕರೆಯುವಿರಿ. ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ."

## ದೀಪಸ್ತಂಭದ ದರ್ಶನ

**4** ಅನಂತರ ಸೂತ್ರಧಾರಿಯಾದ ದೂತನು ಮತ್ತೆ ಬಂದು ನಿದ್ರೆ ಹತ್ತಿದವನಂತಿದ್ದ ನನ್ನನ್ನು ಎಚ್ಚರಗೊಳಿಸಿದನು. 2"ಏನನ್ನು ನೋಡುತ್ತಿರುವೆ?" ಎಂದು ಅವನು ನನ್ನನ್ನು ಕೇಳಿದಾಗ ನಾನು, "ಇಗೋ, ಏಳು ದೀಪಗಳುಳ್ಳ ಸುವರ್ಣಮಯ ದೀಪಸ್ತಂಭವೊಂದನ್ನು ನೋಡುತ್ತಿದ್ದೇನೆ. ಅದರ ಮೇಲ್ಗಡೆ ಎಣ್ಣೆಯ ಪಾತ್ರೆ ಇದೆ. ಅದರ ಮೇಲೆ ದೀಪಗಳಿಗೆ ಏಳು ನಾಳಗಳಿವೆ. 3ದೀಪಸ್ತಂಭದ ಪಕ್ಕದಲ್ಲಿ ಬಲಗಡೆ ಒಂದು, ಎಡಗಡೆ ಇನ್ನೊಂದು – ಹೀಗೆ ಎರಡು ಎಣ್ಣೆಯ ಮರಗಳಿವೆ," ಎಂದನು. 4ಸೂತ್ರಧಾರಿ ಆದ ಆ ದೂತನನ್ನು "ಸ್ವಾಮಿ, ಇದು ಏನನ್ನು ಸೂಚಿಸುತ್ತದೆ?" ಎಂದು ಕೇಳಿದೆ. 5ಅದಕ್ಕೆ ಆ ದೂತನು, "ಇದು ಏನೆಂದು ನಿನಗೆ ತಿಳಿಯುವುದಿಲ್ಲವೋ?" ಎಂದು ಪ್ರಶ್ನಿಸಿದನು. ಅದಕ್ಕೆ ನಾನು "ಇಲ್ಲ ಸ್ವಾಮಿ" ಎಂದು ಉತ್ತರಕೊಟ್ಟೆ.

10 ಆಗ ದೂತನು "ಈ ಸ್ತಂಭದಲ್ಲಿರುವ ಏಳು ದೀಪಗಳು ಭೂಲೋಕದ ಎಲ್ಲಾ ಭಾಗಗಳನ್ನು ವೀಕ್ಷಿಸುವ ಸರ್ವೇಶ್ವರಸ್ವಾಮಿಯ ಏಳು ಕಣ್ಣುಗಳನ್ನು ಸೂಚಿಸುತ್ತವೆ," ಎಂದನು.

11 ಪುನಃ ನಾನು ದೇವದೂತನನ್ನು, "ದೀಪಸ್ತಂಭದ ಎಡಬಲಗಳಲ್ಲಿರುವ ಎಣ್ಣೆಮರಗಳು ಏನನ್ನು ಸೂಚಿಸುತ್ತವೆ?" ಎಂದು ಕೇಳಿದೆ. 12(ಮತ್ತೆ ಅವನನ್ನು – "ತಮ್ಮೊಳಗಿಂದ ಚಿನ್ನದಂಥ ಎಣ್ಣೆಯನ್ನು ಪಾತ್ರೆಯಲ್ಲಿ ತುಂಬಿಸುವ ಎರಡು ಬಂಗಾರದ ನಾಳಗಳಿವೆಯಲ್ಲಾ; ಆ ನಾಳಗಳ ಬಾಯಿಗೆ ಸೇರಿರುವ ಎರಡು ಎಣ್ಣೆ ಕಾಯಿಗುತ್ತಿಗಳು ಏನು?" ಎಂದು ಕೇಳಿದೆ.)

13 ಅದಕ್ಕೆ ಆ ದೂತನು: "ಅವು ಏನೆಂದು ನಿನಗೆ ತಿಳಿಯುವುದಿಲ್ಲವೋ" ಎಂದು ಕೇಳಿದಾಗ ನಾನು: "ಇಲ್ಲ ಸ್ವಾಮಿ," ಎಂದೆ.

14 ಅದಕ್ಕೆ ಅವನು, "ಇವು ದೇವರಿಂದ ಆಯ್ಕೆಯಾಗಿ ಎಣ್ಣೆಯಿಂದ ಅಭಿಷಿಕ್ತರಾದ ಇಬ್ಬರು ವ್ಯಕ್ತಿಗಳನ್ನು ಸೂಚಿಸುತ್ತವೆ. ಸರ್ವಲೋಕದ ಒಡೆಯನ ಸನ್ನಿಧಿಯಲ್ಲಿರುವ ಸೇವಕರನ್ನು ಸೂಚಿಸುತ್ತವೆ" ಎಂದನು.

## ಜೆರುಬ್ಬಾಬೆಲನಿಗೆ ದೇವರಿತ್ತ ವಾಗ್ದಾನ

6 ದೂತನು ನನಗೆ ಹೀಗೆಂದು ಹೇಳಿದನು: "ಜೆರುಬ್ಬಾಬೆಲನಿಗೆ ಈ ಸಂದೇಶವನ್ನು ಕೊಡು – ನಿನಗೆ ಜಯದೊರಕುವುದು. ನಿನ್ನ ಶಕ್ತಿ ಸಾಮರ್ಥ್ಯದಿಂದಲ್ಲ, ಸೇನಾಬಲದಿಂದಲೂ ಅಲ್ಲ; ನನ್ನ ಆತ್ಮ ಶಕ್ತಿಯಿಂದ. ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ.

7 ಅಡ್ಡಿ ಅಡಚಣೆಗಳು ಬೆಟ್ಟದಂತಿದ್ದರೂ ನೀನು ದೇವಾಲಯವನ್ನು ಕಟ್ಟುವೆ. ಅಂತ್ಯದಲ್ಲಿ ಕಲಶವನ್ನು ಸ್ಥಾಪಿಸುವಾಗ ಜನರು 'ಎಷ್ಟು ರಮ್ಯ! ಎಷ್ಟು ಸುಂದರ!' ಎಂದು ಉದ್ಗರಿಸುವರು."

8 ಸರ್ವೇಶ್ವರ ನನಗೆ ಇನ್ನೊಂದು ಸಂದೇಶವಿತ್ತರು: "ಜೆರುಬ್ಬಾಬೆಲನು ಮಹಾದೇವಾಲಯದ ಕಟ್ಟಡಕ್ಕೆ ಅಸ್ತಿಭಾರವನ್ನು ಹಾಕಿದ್ದಾನೆ. ಆ ಕಟ್ಟಡವನ್ನು ಅವನೇ ಪೂರೈಸುವನು. ನಿನ್ನನ್ನು ಜನರ ಬಳಿಗೆ

ಕಳುಹಿಸಿದಾತ ಸೇನಾಧೀಶ್ವರ ಸರ್ವೇಶ್ವರ ಎಂದು ಆಗ ಸರ್ವರಿಗೆ ಗೊತ್ತಾಗುವುದು. 9ಪ್ರಾರಂಭದಲ್ಲಿ ಚಿಕ್ಕ ಕಾರ್ಯಗಳನ್ನು ನೋಡಿ ಪರಿಹಾಸ್ಯ ಮಾಡಿದವರು ಆಗ ಜೆರುಬ್ಬಾಬೆಲನ ಕೈಯಲ್ಲಿ ಅಳತೆನೂಲಿನ ಗುಂಡನ್ನು ಕಂಡು ಸಂತೋಷಪಡುವರು."

### ಹಾರುವ ಸುಳಿಯ ದರ್ಶನ

**5** ಪುನಃ ನಾನು ಕಣ್ಣೆತ್ತಿ ನೋಡಲು, ಇಗೋ, ಹಾರುತ್ತಿರುವ ಒಂದು ಸುರುಳಿ ಕಾಣಿಸಿತು. 2ದೂತನು ನನ್ನನ್ನು, "ನಿನಗೆ ಏನು ಕಾಣಿಸುತ್ತಿದೆ?" ಎಂದು ಕೇಳಿದನು. ಅದಕ್ಕೆ ನಾನು "ಹಾರುತ್ತಿರುವ ಪತ್ರದ ಸುರುಳಿ ಕಾಣಿಸುತ್ತಿದೆ. ಅದರ ಉದ್ದ ಒಂಬತ್ತು ಮೀಟರ್, ಅಗಲ ನಾಲ್ಕುವರೆ ಮೀಟರ್," ಎಂದು ಉತ್ತರಕೊಟ್ಟೆ.

3 ಆಗ ಅವನು ನನಗೆ "ನಾಡಿನ ಮೇಲೆ ಬಂದೆರಗಲಿರುವ ಶಾಪ ಅದರಲ್ಲಿ ಲಿಖಿತ ಆಗಿದೆ. ಒಂದು ಕಡೆ ಬರೆದಿರುವಂತೆ, ಪ್ರತಿಯೊಬ್ಬ ಕಳ್ಳನನ್ನು ನಾಡಿನಿಂದ ಹೊರದೂಡಲಾಗುವುದು. ಮತ್ತೊಂದು ಕಡೆ ಬರೆದಿರುವಂತೆ, ಸುಳ್ಳಾಣೆ ಇಡುವ ಪ್ರತಿಯೊಬ್ಬನನ್ನೂ ನಾಡಿನಿಂದ ಹೊರದೂಡಲಾಗುವುದು. 4ಸೇನಾಧೀಶ್ವರ ಸರ್ವೇಶ್ವರ ಹೀಗೆನ್ನುತ್ತಾರೆ: "ನಾನು ಶಾಪವನ್ನು ಕಳುಹಿಸುತ್ತೇನೆ. ಅದು ಕಳ್ಳನ ಮನೆಯನ್ನೂ ನನ್ನ ಹೆಸರೆತ್ತಿ ಸುಳ್ಳಾಣೆಯಿಡುವವನ ಮನೆಯನ್ನೂ ಹೊಕ್ಕು, ಅಲ್ಲಿ ತಂಗಿದ್ದು ಅದನ್ನು ಕಲ್ಲುಮರ ಸಹಿತ ಸಂಪೂರ್ಣವಾಗಿ ಭಸ್ಮಮಾಡುವುದು," ಎಂದನು.

### ಕೊಳಗದಲ್ಲಿದ್ದ ಮಹಿಳೆಯ ದರ್ಶನ

5 ಅನಂತರ ಸೂತ್ರಧಾರಿಯಾದ ದೂತನು ನನ್ನ ಬಳಿ ಬಂದು: "ಮತ್ತೊಂದು ಏನೋ ಬರುತ್ತಿದೆ, ನೋಡು," ಎಂದನು. 6"ಏನದು?" ಎಂದು ನಾನು ವಿಚಾರಿಸಲು, ಅವನು, "ನಿನಗೆ ಕಾಣಿಸುತ್ತಿರುವ ಆ ವಸ್ತು ಒಂದು ಕೊಳಗದ ಪಾತ್ರೆ," ಎಂದನು. ಅಲ್ಲದೆ, "ಅದು ಇಡೀ ನಾಡಿನ ಅಧರ್ಮದ ಪ್ರತೀಕ," ಎಂದನು.

7 ಆಗ ಕೊಳಗದ ತಟ್ಟೆಯಾಕಾರದ ಮುಚ್ಚಳವು ತೆಗೆಯಲಾಯಿತು. ಇಗೋ, ಅದರಲ್ಲಿ ಮಹಿಳೆಯೊಬ್ಬಳು ಕುಳಿತಿದ್ದಳು. 8ಸೂತ್ರಧಾರಿಯಾದ ದೂತನು: "ಇವಳೇ ಪಾಪದ ಪ್ರತೀಕ," ಎಂದು ಹೇಳಿ, ಅವಳನ್ನು ಕೊಳಗದೊಳಗೆ ಅದುಮಿ, ಭಾರವಾದ ಆ ಸೀಸದ ಮುಚ್ಚಳವನ್ನು ತಟ್ಟನೆ ಕೊಳಗದ ಬಾಯಿಗಿಟ್ಟು ಮುಚ್ಚಿಬಿಟ್ಟನು. 9ಪುನಃ ನಾನು ಕಣ್ಣೆತ್ತಿ ನೋಡಲು, ಇಗೋ, ಕೊಕ್ಕರೆಯ ರೆಕ್ಕೆಗಳಂತಿರುವ ರಭಸವಾದ ರೆಕ್ಕೆಗಳುಳ್ಳ ಇಬ್ಬರು ಮಹಿಳೆಯರು ಬರುತ್ತಿರುವುದನ್ನು ಕಂಡೆನು. ಅವರು ಕೊಳಗದ ಪಾತ್ರೆಯನ್ನು ಎತ್ತಿಕೊಂಡು ಹಾರಿಹೋದರು.

10 "ಅವರು ಕೊಳಗವನ್ನು ಎಲ್ಲಿಗೆ ಎತ್ತಿಕೊಂಡು ಹೋಗುತ್ತಿದ್ದಾರೆ?" ಎಂದು ನಾನು ಕೇಳಿದೆ.

11 ಅದಕ್ಕೆ ಸೂತ್ರಧಾರಿಯಾದ ದೂತನು, "ಬಾಬಿಲೋನಿಯಾ ದೇಶಕ್ಕೆ: ಅಲ್ಲಿ ಅವಳಿಗೆ ಗುಡಿಕಟ್ಟುವುದಕ್ಕಾಗಿ ಹೋಗುತ್ತಿದ್ದಾರೆ. ಅದು ಸಿದ್ಧವಾದಾಗ ಅಲ್ಲಿನ ಪೀಠದ ಮೇಲೆ ಆ ಕೊಳಗವನ್ನು ಪ್ರತಿಷ್ಠಾಪಿಸಲಾಗುವುದು," ಎಂದನು.

### ನಾಲ್ಕು ರಥಗಳ ದರ್ಶನ

**6** ನನಗೆ ಇನ್ನೊಂದು ದರ್ಶನವಾಯಿತು: ಇಗೋ, ಎರಡು ಬೆಟ್ಟಗಳ ನಡುವೆ ಬರುತ್ತಿರುವ ನಾಲ್ಕು ರಥಗಳು ಕಾಣಿಸಿದವು. ಅವು ಕಂಚಿನ ಬೆಟ್ಟಗಳಾಗಿದ್ದವು. 2ಮೊದಲನೆಯ ರಥಕ್ಕೆ ಕೆಂಪು ಕುದುರೆಗಳು, ಎರಡನೆಯ ರಥಕ್ಕೆ ಕಪ್ಪು ಕುದುರೆಗಳು, 3ಮೂರನೆಯ ರಥಕ್ಕೆ ಬಿಳೀ ಕುದುರೆಗಳು, ನಾಲ್ಕನೆಯ ರಥಕ್ಕೆ ಮಚ್ಚೆ ಮಚ್ಚೆಯ ಬಲವಾದ ಕುದುರೆಗಳು ಕಟ್ಟಿದ್ದವು. 4ಆಗ, "ಸ್ವಾಮಿ, ಇದೆಲ್ಲ ಏನು?" ಎಂದು ಸೂತ್ರಧಾರಿಯಾದ ದೂತನನ್ನು ಪ್ರಶ್ನಿಸಿದೆ.

5 ಅದಕ್ಕೆ ದೂತನು, "ಇವು ಆಕಾಶದ ನಾಲ್ಕು ಮಾರುತಗಳು; ಭೂಲೋಕದೊಡೆಯನ ಸಾನ್ನಿಧ್ಯದಿಂದ ಇದೀಗಲೆ ಹೊರಟುಬಂದಿವೆ," ಎಂದನು.

6 ಕಪ್ಪು ಕುದುರೆಗಳ ರಥ ಉತ್ತರ ದೇಶಕ್ಕೆ ಹೊರಟಿತು. ಬಿಳಿ ಕುದುರೆಗಳ ರಥ ಅದನ್ನು ಹಿಂಬಾಲಿಸಿ ಪಶ್ಚಿಮಕ್ಕೆ ಹೋಯಿತು. ಮಚ್ಚೆ ಕುದುರೆಗಳ ರಥ ದಕ್ಷಿಣ ದೇಶಕ್ಕೆ ತೆರಳಿತು. 7"ಕೆಂಪು ಕುದುರೆಗಳು ಲೋಕದಲ್ಲೆಲ್ಲ ಗಸ್ತು ತಿರುಗಿ," ಎಂದು ಅಪ್ಪಣೆ ಮಾಡಲು, ಅವು ಅಂತೆಯೇ ಮಾಡಿದವು. 8ಆಮೇಲೆ ದೂತನು ನನಗೆ, "ಉತ್ತರ ದೇಶಕ್ಕೆ ಹೊರಟ ಕುದುರೆಗಳ ರಥ ಸರ್ವೇಶ್ವರಸ್ವಾಮಿಯ ಕೋಪವನ್ನು ಶಮನಗೊಳಿಸಿದೆ," ಎಂದು ಕೂಗಿ ಹೇಳಿದನು.

## ಯೆಹೋಶುವನ ಕಿರೀಟಧಾರಣೆ

9 ಸರ್ವೇಶ್ವರ ನನಗಿತ್ತ ಆದೇಶವಿದು: 10"ಈ ದಿನವೇ ಜೆಫನ್ಯನ ಮಗನಾದ ಯೋಷೀಯನ ಮನೆಗೆ ಹೋಗು. ಬಾಬಿಲೋನಿಗೆ ಸೆರೆಹೋಗಿ ಮರಳಿ ಬಂದಿಳಿದಿರುವ ಹೆಲ್ದಾಯ, ತೊಬೀಯ, ಯೆದಾಯ ಎಂಬವರಿಂದ ಕಾಣಿಕೆಯನ್ನು ಸ್ವೀಕರಿಸು. 11ಅವರಿಂದ ಪಡೆದ ಬೆಳ್ಳಿ ಬಂಗಾರಗಳನ್ನು ತೆಗೆದುಕೊಂಡು ಒಂದು ಕಿರೀಟವನ್ನು ಮಾಡಿಸು. ಅದನ್ನು ಯೆಹೋಚಾದಾಕನ ಮಗನೂ ಮಹಾಯಾಜಕನೂ ಆದ ಯೆಹೋಶುವನ ತಲೆಗೆ ತೊಡಿಸು. 12ಮತ್ತು ಅವನಿಗೆ ಹೀಗೆಂದು ಹೇಳು: ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: ಮೊಳಕೆಯೆಂಬ ಪುರುಷನು ಮೂಡುವನು! ಆತನು ಇದ್ದ ಸ್ಥಳದಲ್ಲಿಯೇ ಅರಳಿ ಸರ್ವೇಶ್ವರನ ಆಲಯವನ್ನು ಕಟ್ಟಿಸುವನು. 13ಹೌದು, ಅವನೇ ಸರ್ವೇಶ್ವರನ ಆಲಯವನ್ನು ಕಟ್ಟಿಸಿದ ಮೇಲೆ, ರಾಜವೈಭವವನ್ನು ತಾಳಿ ತನ್ನ ಸಿಂಹಾಸನದಲ್ಲಿ ಆಸೀನನಾಗಿ ಆಳುವನು. ಯಾಜಕನೊಬ್ಬನು ಅವನ ಆಸ್ಥಾನದಲ್ಲಿರುವನು. ಅವರಿಬ್ಬರೂ ಶಾಂತಿಸಮಾಧಾನದಿಂದಿರುವರು. 14ಅವರ ಕಿರೀಟವು ಹೇಲಮ್, ತೊಬೀಯ, ಯೆದಾಯ ಮತ್ತು ಜೆಫನ್ಯನ ಮಗ ಹೇನ್ – ಇವರ ಜ್ಞಾಪಕಾರ್ಥವಾಗಿ ಆಲಯದಲ್ಲೇ ಇರುವುದು."

15 ದೂರದಲ್ಲಿ ವಾಸಿಸುವ ಜನರು ಅಲ್ಲಿಗೆ ಬಂದು ಸರ್ವೇಶ್ವರಸ್ವಾಮಿಯ ಆಲಯವನ್ನು ಕಟ್ಟುವುದಕ್ಕೆ ನೆರವಾಗುವರು. ಆಗ ನನ್ನನ್ನು ನಿಮ್ಮ ಬಳಿಗೆ ಕಳುಹಿಸಿದಾತ ಸೇನಾಧೀಶ್ವರ ಸರ್ವೇಶ್ವರಸ್ವಾಮಿಯೇ ಎಂಬುದು ನಿಮಗೆ ಮನದಟ್ಟಾಗುವುದು. ನಿಮ್ಮ ದೇವರಾದ ಆ ಸ್ವಾಮಿಯ ಮಾತನ್ನು ನೀವು ಮನಃಪೂರ್ವಕವಾಗಿ ಅನುಸರಿಸಿದರೆ ಇದೆಲ್ಲವೂ ಸರಿಯಾಗಿ ನೆರವೇರುವುದು.

## ಕಪಟ ಉಪವಾಸ ಸರಿಯಲ್ಲ

**7** ಅರಸನಾದ ಡೇರಿಯಸನ ಆಳ್ವಿಕೆಯ ನಾಲ್ಕನೆಯ ವರ್ಷದ ಒಂಭತ್ತನೆಯ ತಿಂಗಳ (ಅಂದರೆ ಕಿಸ್ಲೇವ್ ತಿಂಗಳಿನ) ನಾಲ್ಕನೆಯ ದಿನದಲ್ಲಿ ಸರ್ವೇಶ್ವರ ಜೆಕರ್ಯನಿಗೆ ಒಂದು ಸಂದೇಶವನ್ನು ಅನುಗ್ರಹಿಸಿದರು. 2ಅಷ್ಟರಲ್ಲಿ ಬೇತೇಲಿನ ಜನರು ಸರೆಚರನನ್ನು, ರೆಗೆಮ್ ಮೆಲೆಕ್‍ನನ್ನು ಹಾಗೂ ಅವನ ಪರಿಜನರನ್ನು ಸರ್ವೇಶ್ವರಸ್ವಾಮಿಯ ಆಶೀರ್ವಾದವನ್ನು ಕೋರಲು ದೇವಾಲಯಕ್ಕೆ ಕಳುಹಿಸಿದ್ದರು. 3ಅಲ್ಲದೆ, ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ದೇವಾಲಯದ ಯಾಜಕರನ್ನೂ ಪ್ರವಾದಿಗಳನ್ನೂ ಕಂಡು, "ನಾವು ಇಷ್ಟು ವರ್ಷಗಳಿಂದ ಅನುಸರಿಸಿಕೊಂಡು ಬಂದಂತೆ, 5ನೆಯ ತಿಂಗಳಲ್ಲಿ ಉಪವಾಸವಿದ್ದು ಪ್ರಲಾಪಿಸಬೇಕೋ?" ಎಂದು ವಿಚಾರಿಸಿಕೊಂಡು ಬರಬೇಕೆಂದು ಅವರಿಗೆ ಆಜ್ಞಾಪಿಸಿದರು.

ಇಂತಿರಲು, ಸೇನಾಧೀಶ್ವರ ಸರ್ವೇಶ್ವರ ನನಗೆ ಈ ಸಂದೇಶವನ್ನು ದಯಪಾಲಿಸಿದರು: 5"ಯಾಜಕರಿಗೂ ನಾಡಿನ ಸಕಲ ಜನರಿಗೂ ಹೀಗೆಂದು ತಿಳಿಸು: ನೀವು ಕಳೆದ ಎಪ್ಪತ್ತು ವರ್ಷಗಳಿಂದ 5ನೇ ಮತ್ತು 7ನೇ ತಿಂಗಳುಗಳಲ್ಲಿ ಉಪವಾಸಮಾಡಿ ಗೋಳಾಡಿದ್ದು ನನಗೋಸ್ಕರವೋ? 6ನೀವು ಭೋಜನ ಮಾಡಿದ್ದು, ಪಾನಮಾಡಿದ್ದು ನಿಮ್ಮ ತೃಪ್ತಿಗಾಗಿಯೇ ಅಲ್ಲವೆ?"

7 "ಜೆರುಸಲೇಮ್ ಮತ್ತು ಅದರ ಸುತ್ತಮುತ್ತಲಿನ ಪಟ್ಟಣಗಳು ಜನಭರಿತವಾಗಿ ನೆಮ್ಮದಿಯಿಂದಿದ್ದಾಗ ಹಾಗೂ ದಕ್ಷಿಣ ಪ್ರಾಂತ್ಯದಲ್ಲೂ ಬಯಲು ಪ್ರದೇಶದಲ್ಲೂ ಪ್ರಜೆಯು ತುಂಬಿದ್ದಾಗ ಪ್ರವಾದಿಗಳ ಮುಖಾಂತರ ಪ್ರಕಟಿಸಿದ ಸಂದೇಶ ಇದೇ ಅಲ್ಲವೆ?"

## ಅವಿಧೇಯತೆ – ಗಡೀಪಾರಿಗೆ ಕಾರಣ

8 ಅಲ್ಲದೆ ಸರ್ವೇಶ್ವರ ಜೆಕರ್ಯನಿಗೆ ಕೊಟ್ಟ ಸಂದೇಶ ಏನೆಂದರೆ: 9"ಸತ್ಯಾನುಸಾರ ನ್ಯಾಯ
ತೀರಿಸಿರಿ. 10ಒಬ್ಬರಿಗೊಬ್ಬರು ಪ್ರೀತಿ ಕರುಣೆಯನ್ನು ತೋರಿಸಿರಿ. ವಿಧವೆಯರು, ಅನಾಥರು, ವಿದೇಶಿಯರು,
ಬಡವರು, ಇವರಾರನ್ನೂ ಶೋಷಣೆಮಾಡಬೇಡಿ. ನಿಮ್ಮಲ್ಲಿ ಯಾವನೂ ತನ್ನ ಸಹೋದರನಿಗೆ ಕೇಡನ್ನು
ಬಗೆಯದಿರಲಿ.

11 "ನಿಮ್ಮ ಪೂರ್ವಜರು ಕಿವಿಗೊಡದೆ ಹೋದರು: ಹಟಮಾರಿಗಳಾದರು; ಮಂದಮತಿಗಳಾದರು;
ಅವರ ಹೃದಯ ಗೋರ್ಕಲ್ಲಿನಂತೆ ಆಯಿತು. 12ಧರ್ಮಶಾಸ್ತ್ರವನ್ನಾಗಲೀ ಪೂರ್ವಕಾಲದ ಪ್ರವಾದಿಗಳ
ಮೂಖಾಂತರ, ಸೇನಾಧೀಶ್ವರ ಸರ್ವೇಶ್ವರ ಆದ ನಾನು ತಿಳಿಸಿದ ನನ್ನಾತ್ಮ ಪ್ರೇರಿತ ಮಾತುಗಳನ್ನಾಗಲೀ
ಕೇಳದೆ ಹೋದರು. ಹೀಗೆ ನನ್ನ ಕಡುಕೋಪಕ್ಕೆ ಗುರಿಯಾದರು. 13ಆಗ ಹೀಗೆಂದೆ: 'ನಾನು ಕೂಗಿದಾಗ
ಅವರು ಕೇಳದೆ ಹೋದರು; ಅವರು ಕೂಗಿದಾಗ ನಾನು ಕೇಳಲಿಲ್ಲ.' 14ಬಿರುಗಾಳಿಯಂತೆ ಅವರನ್ನು
ಅಪರಿಚಿತ ಜನಾಂಗಗಳ ಮಧ್ಯೆ ತೂರಿ ಚದರಿಬಿಟ್ಟೆ; ಹಾಗೆ ಅವರು ಚದರಿಹೋದ ಮೇಲೆ ನಾಡು
ಹಾಳಾಯಿತು. ಅಲ್ಲಿ ಯಾರೂ ಉಳಿಯದಂತಾಯಿತು. ಅವರ ನಿಮಿತ್ತ ಚೆಲುವ ನಾಡು ನಿರ್ಜನ
ಪ್ರದೇಶವಾಯಿತು."

## ಜೆರುಸಲೇಮನ್ನು ಪುನಃನಿರ್ಮಿಸಲು ಪ್ರತಿಜ್ಞೆ

**8** ಸೇನಾಧೀಶ್ವರ ಸರ್ವೇಶ್ವರ ಜೆಕರ್ಯನಿಗೆ ಪುನಃಕೊಟ್ಟ ಸಂದೇಶವಿದು: 2 "ಸಿಯೋನಿನ ವಿಷಯದಲ್ಲಿ
ನನಗೆ ತುಂಬಾ ಅಭಿಮಾನವಿದೆ. ಅದರ ಶತ್ರುಗಳ ವಿಷಯದಲ್ಲಿ ಅಧಿಕ ರೋಷವಿದೆ." 3ಸರ್ವೇಶ್ವರ
ಇಂತೆನ್ನುತ್ತಾರೆ: "ಸಿಯೋನಿಗೆ ಹಿಂದಿರುಗುವೆನು. ಜೆರುಸಲೇಮಿನ ನಡುವೆ ವಾಸ ಮಾಡುವೆನು. ಆಗ
ಜೆರುಸಲೇಮ್ 'ನಿಷ್ಠಾವಂತ ನಗರ' ಎನಿಸಿಕೊಳ್ಳುವುದು. ಅದಕ್ಕೆ ಸೇನಾಧೀಶ್ವರ ಸರ್ವೇಶ್ವರನ ಪರ್ವತ, ಪವಿತ್ರ
ಪರ್ವತ ಎಂಬ ಹೆಸರು ಬರುವುದು."

4 ಸೇನಾಧೀಶ್ವರ ಸರ್ವೇಶ್ವರ ಹೀಗೆನ್ನುತ್ತಾರೆ: "ಮುದುಕರು, ಮುದುಕಿಯರು ಮತ್ತೆ ಜೆರುಸಲೇಮಿನ
ಚೌಕಗಳಲ್ಲಿ ಕುಳಿತುಕೊಳ್ಳುವರು. ವೃದ್ಧಾಪ್ಯದ ಪ್ರಯುಕ್ತ ಒಬ್ಬೊಬ್ಬರ ಕೈಯಲ್ಲಿ ಊರುಗೋಲು ಇರುವುದು.
5ಪಟ್ಟಣದ ಹಾದಿಬೀದಿಗಳಲ್ಲಿ ಮಕ್ಕಳು ತುಂಬಿಕೊಂಡಿರುವರು."

6 ಸೇನಾಧೀಶ್ವರ ಸರ್ವೇಶ್ವರ ಹೀಗೆನ್ನುತ್ತಾರೆ: "ಅಳಿದುಳಿದಿರುವ ಜನರಿಗೆ ಇಂಥ ಪರಿಸ್ಥಿತಿ
ಅತಿಶಯವಾಗಿ ಕಾಣಬಹುದು. ಆದರೆ ನನಗೆ ಅದೇನೂ ಅತಿಶಯವಲ್ಲ." ಇದು ಸರ್ವೇಶ್ವರನ ನುಡಿ.

7 ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ. "ಇಗೋ, ನಾನು ನನ್ನ ಜನರನ್ನು ಪೂರ್ವ ಪಶ್ಚಿಮ
ನಾಡುಗಳಿಂದ ಬಿಡುಗಡೆಮಾಡಿ, ಇಲ್ಲಿಗೆ ಬರಮಾಡುವೆನು. 8ಅವರು ಜೆರುಸಲೇಮಿನಲ್ಲೇ ವಾಸವಾಗಿರುವರು.
ನಾನು ಅವರಿಗೆ ದೇವರಾಗಿರುವೆನು; ಅವರು ನನಗೆ ಸತ್ಸಂಬಂಧವುಳ್ಳ, ಸದ್ಧರ್ಮದ ಪ್ರಜೆಗಳಾಗಿರುವರು."

9 ಸೇನಾಧೀಶ್ವರ ಸರ್ವೇಶ್ವರ ಹೀಗೆಂದಿದ್ದಾರೆ: "ನಿಮ್ಮ ಕೈ ಮುಂದಾಗಲಿ. ಈಗ ನೀವು ಕೇಳುತ್ತಿರುವ
ಮಾತುಗಳು ಮಹಾದೇವಾಲಯಕ್ಕೆ ಅಸ್ತಿಭಾರವನ್ನು ಹಾಕಿದ ಕಾಲದಲ್ಲಿ ಪ್ರವಾದಿಗಳು ಆಡಿದ ಮಾತುಗಳೇ.
10ಆ ಕಾಲಕ್ಕೆ ಹಿಂದೆ ಆಳುಗಳಿಗೆ ಕೂಲಿ ಕೊಡುವುದಕ್ಕಾಗಲೀ ಎತ್ತುಗಾಡಿಗಳಿಗೆ ಬಾಡಿಗೆ ಕೊಡುವುದಕ್ಕಾಗಲೀ
ಯಾರಿಗೂ ಶಕ್ತಿ ಇರಲಿಲ್ಲ. ನಾಡಿನಿಂದ ಹೋಗುವವರಿಗಾಗಲೀ, ನಾಡಿನೊಳಗೆ ಪ್ರವೇಶಿಸುವವರಿಗಾಗಲೀ
ಶತ್ರುಗಳ ಕಾಟದಿಂದ ರಕ್ಷಣೆ ಇರಲಿಲ್ಲ. ಒಬ್ಬರಿಗೊಬ್ಬರು ಹಗೆಗಳಾಗಿರುವಂತೆ ಮಾಡಿದ್ದೆ. 11ಇನ್ನು
ಮೇಲಾದರೋ, ಅಳಿದುಳಿದ ಜನರಿಗೆ ಹಾಗೆ ಮಾಡೆನು. ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ.
12ಜನರು ನೆಮ್ಮದಿಯಿಂದ ಬಿತ್ತನೆ ಮಾಡುವರು. ದ್ರಾಕ್ಷಾಲತೆ ಹಣ್ಣುಬಿಡುವುದು. ಭೂಮಿಯಲ್ಲಿ
ಬೆಳೆಯಾಗುವುದು. ಆಕಾಶ ಮಳೆಯನ್ನು ಸುರಿಸುವುದು. ಅಳಿದುಳಿದ ಜನರಿಗೆ ಈ ಸೌಭಾಗ್ಯ ಲಭಿಸುವಂತೆ
ಮಾಡುವೆನು. 13ಜುದೇಯದ ಕುಲಸ್ಥರೇ, ಇಸ್ರಯೇಲ್ ವಂಶಜರೇ, ರಾಷ್ಟ್ರಗಳಲ್ಲಿ ನಿಮ್ಮ ಹೆಸರು ಶಾಪಕ್ಕೆ
ಅಡ್ಡ ಹೆಸರಾಗಿತ್ತು. ಆದರೆ ನಾನು ನಿಮ್ಮನ್ನು ಉದ್ಧರಿಸಿ ನಿಮ್ಮ ಹೆಸರು ಶುಭಸೂಚ್ಯವಾಗುವಂತೆ ಮಾಡುವೆನು.
ಹೆದರಬೇಡಿ; ನಿಮ್ಮ ಕೈ ಮುಂದಾಗಲಿ."

14 ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: "ನಿಮ್ಮ ಪೂರ್ವಜರ ನಿಮಿತ್ತ ನಾನು ಕೋಪಗೊಂಡಾಗ, ನಿಮಗೆ ಕೇಡುಮಾಡಬೇಕೆಂದು ನಿಷ್ಕರುಣಿಯಾಗಿ ಸಂಕಲ್ಪಿಸಿದೆ. 15ಆದರೆ ಈಗ ಜೆರುಸಲೇಮಿನವರಿಗೂ ಜುದೇಯದ ಜನರಿಗೂ ಮೇಲುಮಾಡಬೇಕೆಂದು ಹೊಸ ಸಂಕಲ್ಪ ಮಾಡಿದ್ದೇನೆ. ಆದುದರಿಂದ ಹೆದರಬೇಡಿ." ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ.

16 "ನೀವು ಮಾಡಬೇಕಾದುದು ಏನೆಂದರೆ: ಪ್ರತಿಯೊಬ್ಬನು ತನ್ನ ನೆರೆಯವನೊಡನೆ ಸತ್ಯವನ್ನೇ ಆಡಲಿ. ನ್ಯಾಯಾಲಯಗಳಲ್ಲಿ ನಿಮ್ಮ ತೀರ್ಪು ನ್ಯಾಯಸಮ್ಮತವಾಗಿರಲಿ, ಶಾಂತಿಯ ಸಾಧನ ಆಗಿರಲಿ. 17ನಿಮ್ಮಲ್ಲಿ ಯಾರೂ ನೆರೆಯವನಿಗೆ ಕೇಡು ಬಗೆಯದಿರಲಿ. ಸುಳ್ಳುಸಾಕ್ಷ್ಯಕ್ಕೆ ಎಂದೂ ಸಂತೋಷಿಸಬೇಡಿ. ಇದೆಲ್ಲ ನನಗೆ ಅಸಹ್ಯ." ಇದು ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯ ನುಡಿ.

18 ಸೇನಾಧೀಶ್ವರ ಸರ್ವೇಶ್ವರ ನನಗೆ ಕೊಟ್ಟ ಸಂದೇಶವೇನೆಂದರೆ: 19"ನಾಲ್ಕನೇ, ಐದನೇ, ಏಳನೇ ಮತ್ತು ಹತ್ತನೇ ತಿಂಗಳುಗಳ ಉಪವಾಸ ಇವು ಯೆಹೂದ್ಯ ವಂಶಕ್ಕೆ ವಿಶೇಷ ಹಬ್ಬದ ದಿನಗಳಾಗಿ ಮಾರ್ಪಟ್ಟು, ಜನರು ಹರ್ಷಿಸಿ ಆನಂದಿಸುವರು. ಇಂತಿರಲು ಸತ್ಯವನ್ನೂ ಸಮಾಧಾನವನ್ನೂ ಪ್ರೀತಿಸಿರಿ."

20 ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: "ಇನ್ನು ಮುಂದೆ ಜನಾಂಗಗಳೂ ಹಲವು ನಗರ ನಿವಾಸಿಗಳೂ ಜೆರುಸಲೇಮಿಗೆ ಬರುವರು. 21'ಸೇನಾಧೀಶ್ವರ ಸರ್ವೇಶ್ವರಸ್ವಾಮಿಯನ್ನು ಆರಾಧಿಸಲು, ಅವರ ಆಶೀರ್ವಾದವನ್ನು ಬೇಡಲು ದೇವಾಲಯಕ್ಕೆ ಹೋಗುತ್ತಿದ್ದೇವೆ. ನಮ್ಮೊಡನೆ ಬನ್ನಿ, ಹೋಗೋಣ' ಎಂದು ಒಂದು ಊರಿನವರು ಮತ್ತೊಂದೂರಿನವರಿಗೆ ಹೇಳುವರು.

22 "ನಾನಾ ದೇಶಗಳಿಂದ, ಪ್ರಬಲ ರಾಷ್ಟ್ರಗಳಿಂದ ಸೇನಾಧೀಶ್ವರ ಸರ್ವೇಶ್ವರಸ್ವಾಮಿಯನ್ನು ಆರಾಧಿಸಿ, ಅವರ ಆಶೀರ್ವಾದವನ್ನು ಕೋರಲು ಜನರು ಜೆರುಸಲೇಮಿಗೆ ಬರುವರು. 23ಆ ದಿನದಲ್ಲಿ ವಿವಿಧ ಭಾಷೆಗಳನ್ನಾಡುವ ರಾಷ್ಟ್ರಗಳಿಂದ ಹತ್ತು ಹತ್ತು ಮಂದಿ ಬಂದು ಯೆಹೂದ್ಯನೊಬ್ಬನ ಸೆರಗನ್ನು ಹಿಡಿದುಕೊಂಡು, 'ನಾವೂ ನಿಮ್ಮೊಂದಿಗೆ ಬರುತ್ತೇವೆ. ಏಕೆಂದರೆ ದೇವರು ನಿಮ್ಮೊಡನೆ ಇದ್ದಾರೆ ಎಂಬ ಸುದ್ದಿಯನ್ನು ಕೇಳಿದ್ದೇವೆ' ಎಂದು ಹೇಳುವರು. ಇದು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ನುಡಿ."

### ನೆರೆರಾಷ್ಟ್ರಗಳಿಗೆ ಬರಲಿರುವ ದಂಡನೆ

**9** ಹದ್ರಾಕ್ ನಾಡಿಗೂ ದಮಸ್ಕ ಪಟ್ಟಣಕ್ಕೂ ವಿರುದ್ಧ ಸರ್ವೇಶ್ವರ ನುಡಿದ ದೈವೋಕ್ತಿ: ಸರ್ವೇಶ್ವರಸ್ವಾಮಿ ನರಮಾನವರ ಮೇಲೆ ಕಣ್ಣಿಟ್ಟಿದ್ದಾರೆ. ಹೌದು, ಇಸ್ರಯೇಲಿನ ಸಕಲ ಕುಲಗಳ ಮೇಲೆ ಕಣ್ಣಿಟ್ಟಿದ್ದಾರೆ. 2ಅಂತೆಯೇ ದಮಸ್ಕದ ಪಕ್ಕದಲ್ಲಿರುವ ಹಮಾತಿನ ಮೇಲೆ, ತಾವೇ ಜಾಣರೆಂದು ಕೊಚ್ಚಿಕೊಳ್ಳುತ್ತಿರುವ ಟೈರ್ ಮತ್ತು ಸಿದೋನ್ ಪಟ್ಟಣಗಳ ಮೇಲೆ ಅವರು ಕಣ್ಣಿಟ್ಟಿದ್ದಾರೆ. 3ಟೈರ್ ಪಟ್ಟಣವು ತನ್ನ ಸುತ್ತಲೂ ಗೋಡೆಯನ್ನು ಕಟ್ಟಿಕೊಂಡಿದೆ. ಬೆಳ್ಳಿಯನ್ನು ಮಣ್ಣುಮಸಿಯಂತೆ, ಬಂಗಾರವನ್ನು ಕಡ್ಡಿ ಕಸದಂತೆ ರಾಶಿಮಾಡಿಟ್ಟುಕೊಂಡಿದೆ. 4ಆದರೆ ಸರ್ವೇಶ್ವರ ಅದರ ಆಸ್ತಿಪಾಸ್ತಿಯನ್ನು ಕಿತ್ತುಕೊಂಡು ಅದೆಲ್ಲವನ್ನು ಸಮುದ್ರದಲ್ಲಿ ಎಸೆದುಬಿಡುವರು. ಆ ಪಟ್ಟಣವು ಬೆಂಕಿಗೆ ಆಹುತಿಯಾಗುವುದು.

5 ಇದನ್ನು ಕಂಡು ಅಷ್ಕೆಲೋನ್ ಭಯದಿಂದ ನಡುಗುವುದು. ಗಾಜಾ ಪಟ್ಟಣ ಸಂಕಟದಿಂದ ಗೋಳಾಡುವುದು; ಎಕ್ರೋನ್ ನಿರಾಶೆಯಿಂದ ಪ್ರಲಾಪಿಸುವುದು; ಗಾಜಾಪಟ್ಟಣಕ್ಕೆ ರಾಜನೇ ಇಲ್ಲದಂತಾಗುವುದು. ಅಷ್ಕೆಲೋನ್ ನಿರ್ಜನ ಪ್ರದೇಶವಾಗುವುದು; 6ಅಷ್ಡೋದಿನಲ್ಲಿ ಮಿಶ್ರ ಜಾತಿಯವರು ವಾಸಮಾಡುವರು. ಸರ್ವೇಶ್ವರ ಇಂತೆನ್ನುತ್ತಾರೆ: "ಫಿಲಿಷ್ಟಿಯದ ಗರ್ವವನ್ನು ಅಡಗಿಸುವೆನು. ಅವರು ಸವಿಯುವ ರಕ್ತಸಿಕ್ತ ಮಾಂಸವನ್ನು ಅವರ ಬಾಯಿಂದ ಕಕ್ಕಿಸುವೆನು. 7ಅವರು ಕಚ್ಚುವ ನಿಷಿದ್ಧ ಪದಾರ್ಥಗಳನ್ನು ಅವರ ಹಲ್ಲುಗಳಿಂದ ಕಿತ್ತು ಹಾಕುವೆನು. ಅವರು ಸಹ ಇಸ್ರಯೇಲಿನ ದೇವರಿಗೆ ಮೀಸಲಾದ ಜನರಾಗುವರು; ಯೆಹೂದ್ಯ ಕುಲಗಳಲ್ಲಿ ಒಂದಾಗುವರು. ಎಕ್ರೋಮಿನವರು ಯೆಬೂಸಿಯರಂತೆ ಆಗುವರು. 8ಶತ್ರುಗಳು ಅತ್ತ ಕಾಲಿಡದಂತೆ ನನ್ನ ಆಲಯದ ಸುತ್ತಲು ಪಾಳೆಯಹಾಕಿ ಕಾವಲಿರುವೆನು. ಯಾವ ಬಾಧಕನೂ ನನ್ನ ಜನರ ಮೇಲೆ ಧಾಳಿಮಾಡದಂತೆ ನಾನೇ ಕಣ್ಣಿಟ್ಟು ನೋಡಿಕೊಳ್ಳುವೆನು."

## ಬರಲಿರುವ ಅರಸ

**9** ಸಂತೋಷಿಸಿರಿ, ಆನಂದಿಸಿರಿ, ಸಿಯೋನಿನ
ನಿವಾಸಿಗಳೇ,
ಹರ್ಷೋದ್ಗಾರ ಮಾಡಿರಿ, ಜೆರುಸಲೇಮಿನ
ಜನಗಳೇ.
ಇಗೋ, ಬರುತಿಹನು ನಿಮ್ಮ ಅರಸನು
ನ್ಯಾಯವಂತನು, ಜಯಶೀಲನು ಆತನು
ವಿನಮ್ರನು, ಹೇಸರಗತ್ತೆಯನ್ನೇರಿ
ಸಾಗಿಬರುತಿಹನು.
10 ಕಿತ್ತುಹಾಕುವೆನು ಎಫ್ರಯಿಮಿನ
ರಥಬಲವನು
ನಿಶ್ಶೇಷಮಾಡುವೆನು ಜೆರುಸಲೇಮಿನ
ಅಶ್ವಬಲವನು
ಮುರಿಯಲಾಗುವುದು ಯುದ್ಧದ
ಬಿಲ್ಲುಗಳನು.
ಘೋಷಿಸುವೆನು ಶಾಂತಿಯನು
ರಾಷ್ಟ್ರಗಳಿಗೆ
ಆತನ ರಾಜ್ಯಭಾರ ಸಮುದ್ರದಿಂದ
ಸಮುದ್ರದವರೆಗೆ
ಯೂಫ್ರೆಟಿಸ್ ನದಿಯಿಂದ ಭುವಿಯ
ಕಟ್ಟಕಡೆಯವರೆಗೆ.

ದೈವಜನರ ಜೀವೋದ್ಧಾರ
11 ರಕ್ತಸುರಿಸಿ ನೀವು ನನ್ನೊಡನೆ
ಮಾಡಿಕೊಂಡ ಒಡಂಬಡಿಕೆಯ ನಿಮಿತ್ತ
ಕರೆತರುವೆನು ನಿಮ್ಮವರನು
ಸೆರೆಯಾಳತ್ವದಿಂದ
ಮೇಲೆತ್ತುವೆನು ನಿಮ್ಮವರನು ಆ
ಸೆರೆಬಾವಿಯಿಂದ.
12 ನಂಬಿಕೆಯಿಂದ ಕಾದಿರುವ
ಸೆರೆಯಾಳುಗಳೇ,
ಹಿಂದಿರುಗಿರಿ ನಿಮ್ಮ ಸುಭದ್ರ
ದುರ್ಗಸ್ಥಾನಕೆ
ಇಗೋ, ಈಗಲೂ ಘೋಷಿಸುತ್ತಿರುವೆ:
ನಿಮಗಿಮ್ಮಡಿ ಸೌಭಾಗ್ಯ ನೀಡುವೆ.
13 ಬಗ್ಗಿಸಿಕೊಂಡಿರುವೆ ಜುದೇಯ ಎಂಬ
ಬಿಲ್ಲನು
ಹೂಡಿರುವೆ ಅದರಲಿ ಎಫ್ರಯಿಮೆಂಬ
ಬಾಣವನು.

ಸಿಯೋನ್, ಎತ್ತಿಕಟ್ಟಿರುವೆ ನಿನ್ನವರನು
ಗ್ರೀಕರಿಗಿದಿರಾಗಿ
ಮಾಡುವೆ ನಿನ್ನನು ಶೂರನ ಕತ್ತಿಯನ್ನಾಗಿ.
14 ಸ್ವಜನರಿಗೆ ಸರ್ವೇಶ್ವರ ಪ್ರತ್ಯಕ್ಷನಾಗುವನು
ಮಿಂಚಿನಂತೆ ಬಿಡುವನು ತನ್ನ ಬಾಣಗಳನು
ಮೊಳಗಿಸುವನು ಕಾಳಗದ ತುತೂರಿಯನು
ದಕ್ಷಿಣದ ಬಿರುಗಾಳಿಯೊಂದಿಗೆ
ಮುನ್ನುಗ್ಗುವನು.
15 ರಕ್ಷಿಸುವನು ಸೇನಾಧೀಶ್ವರ ಸರ್ವೇಶ್ವರ
ತನ್ನ ಜನರನು
ನಸುಕಿ ನಾಶಮಾಡುವರವರು ಕವಣೆಗಾರ
ಶತ್ರುಗಳನು.
ಭೋರ್ಗರೆಯುವರು ಕುಡಿದು
ಅಮಲೇರಿದವರಂತೆ
ಇರುವರು ತುಂಬಿ ತುಳುಕುವ
ಬೋಗುಣಿಗಳಂತೆ
ರಕ್ತತೋಯ್ದ ವೇದಿಯ
ಮೂಲೆಮೂಲೆಗಳಂತೆ.
16 ಸ್ವಜನರನು ದೇವ ಸರ್ವೇಶ್ವರ
ಕಾಪಾಡುವನು ಮೇಷಪಾಲನಂತೆ
ನಾಡಿನೊಳು ಥಳಥಳಿಸುವರವರು ಕಿರೀಟದ
ರತ್ನಗಳಂತೆ.
17 ಆಹಾ! ಎಷ್ಟು ಸುಂದರ, ಎಷ್ಟು
ಮನೋಹರ ಆ ನಾಡಿನ ದೃಶ್ಯ !
ಪುಷ್ಟಿಗೊಳಿಸುವುವು
ಯುವಕಯುವತಿಯರನು
ದ್ರಾಕ್ಷೆ, ದವಸಧಾನ್ಯ !

## ಭವ್ಯಭವಿಷ್ಯದ ವಾಗ್ದಾನ

**10** ವಸಂತಕಾಲದಲ್ಲಿ ಮಳೆಗಾಗಿ ಸರ್ವೇಶ್ವರಸ್ವಾಮಿಗೆ ಪ್ರಾರ್ಥನೆ ಮಾಡಿರಿ. ಮೋಡ ಮಿಂಚುಗಳನ್ನು ಗಾಳಿಮಳೆಯನ್ನು ಉಂಟುಮಾಡುವವರು ಅವರೇ. ಸರ್ವರಿಗೂ ಹೊಲಗದ್ದೆಗಳಲ್ಲಿ ಪೈರುಪಚ್ಚೆಗಳನ್ನು ನೀಡುವವರು ಅವರೇ. 2ಗೃಹದೇವತೆಗಳು ನುಡಿಯುವುದು ಜೊಳ್ಳು; ಶಕುನ ಹೇಳುವವರ ಮಾತು ಸುಳ್ಳು. ಸ್ವಪ್ನಕಾರರ ಕನಸುಗಳು ಕಲ್ಪಿತ, ಅವರು ಹೇಳುವ ಸಮಾಧಾನ ವ್ಯರ್ಥ, ಈ ಕಾರಣ ಜನರು ಕುರಿಗಳಂತೆ ಚದರಿದ್ದಾರೆ; ಕುರುಬನಿಲ್ಲದೆ ಕಂಗೆಟ್ಟಿದ್ದಾರೆ.

3 ಸರ್ವೇಶ್ವರ ಹೀಗೆನ್ನುತ್ತಾರೆ: “ಎಂತಲೇ ಕುರಿಗಾಹಿಗಳ ಮೇಲೆ ನನ್ನ ಕೋಪ ಭುಗಿಲೆದ್ದಿದೆ. ಆ ಮುಂದಾಳುಗಳ ಮೇಲೆ ನನ್ನ ದಂಡನೆ ಎರಗಲಿದೆ. ಸೇನಾಧೀಶ್ವರ ಸರ್ವೇಶ್ವರನಾದ ನಾನು ಜುದೇಯ ಕುಲವನ್ನು ನನ್ನ ಮಂದೆಯಂತೆ ಪರಿಪಾಲಿಸುವೆನು. ಅದನ್ನು ವೀರ ಯುದ್ಧಾಶ್ವವನ್ನಾಗಿ ಮಾಡಿಕೊಳ್ಳುವೆನು. 4ಆ ಕುಲದಿಂದಲೇ ಮೂಲೆಗಲ್ಲು, ಗುಡಾರದ ಗೂಟ, ಯುದ್ಧದ ಬಿಲ್ಲುಗಳು ಬರುವುವು. ಆ ಕುಲದಿಂದಲೇ ಸಕಲ ಅಧಿಕಾರಿಗಳು ಹೊರಬರುವರು. 5ಇವರೆಲ್ಲರು ರಣವೀರರಂತೆ ಶತ್ರುಗಳನ್ನು ಬೀದಿಕೆಸರಿನಲ್ಲಿ ತುಳಿದು

ಬಿಡುವರು. ಸರ್ವೇಶ್ವರ ತಮ್ಮ ಸಂಗಡ ಇದ್ದಾರೆಂದು ಧೈರ್ಯದಿಂದ ಯುದ್ಧಮಾಡುವರು, ಎದುರಿಸುವ ಕುದುರೆ ಸವಾರರನ್ನು ಭ್ರಾಂತಿಗೊಳಿಸುವರು.”
6 “ಬಲಗೊಳಿಸುವೆನು ಯೆಹೂದ್ಯ ಕುಲವನು
ಉದ್ಧರಿಸುವೆನು ಜೊಸೇಫನ ವಂಶವನು.
ಕನಿಕರಿಸುವೆನು, ಮರಳಿಬರಮಾಡುವೆನು
ಅವರನು
ನಾನು ಕೈಬಿಟ್ಟವರಂತೆ ಇರಲಾರರವರು ಇನ್ನು.
ಏಕೆನೆ ನಾನೇ ದೇವ ಸರ್ವೇಶ್ವರ ಅವರಿಗೆ
ಕಿವಿಗೊಡುವೆನು ನಾನು ಅವರ ಕರೆಗೆ.
ಸದುತ್ತರವೀಯುವೆನು ಅವರ ಮೊರೆಗೆ.
7 ಬಲಾಢ್ಯ ವೀರರಾಗುವರು ಎಫ್ರಯಿಮ್
ಕುಲದವರು
ದ್ರಾಕ್ಷಾರಸ ಕುಡಿದವರಂತೆ ಮನದಲ್ಲಿ
ಸುಖಿಸುವರು.
ಇದಕಂಡು ಸಂತೋಷಿಸುವರು ಅವರ
ಕುವರಕುವರಿಯರು
ಸರ್ವೇಶ್ವರಸ್ವಾಮಿಯಲಿ ಹೃತ್ಪೂರ್ವಕವಾಗಿ
ಆನಂದಗೊಳ್ಳುವರು.
8 “ಸಭೆಸೇರಿಸುವೆನವರನು ಕರೆದು ಸನ್ನೆಮಾಡಿ
ವಿಮುಕ್ತಗೊಳಿಸುವೆನವರನು ನಿಸ್ಸಂದೇಹವಾಗಿ
ಹಿಂದಿನಂತೆ ಮುಂದೆಯೂ ಬೆಳೆವರವರು
ಸಮೃದ್ಧಿಯಾಗಿ.
9 ಚದರಿದೆನಾದರೂ ಅವರನು ಅನ್ಯ
ರಾಷ್ಟ್ರಗಳಲಿ
ಸ್ಮರಿಸಿಕೊಳ್ಳುವರವರು ನನ್ನನು
ದೂರದೇಶಗಳಲಿ
ಹಿಂದಿರುಗುವರು ಸಂತಾನ ಸಮೇತ ಬದುಕಿ
ಬಾಳಿ.
10 ಕರೆತರುವೆನವರನು ಈಜಿಪ್ಟ್, ಅಸ್ಸೀರಿಯ
ನಾಡುಗಳಿಂದ
ಗಿಲ್ಯಾದ್, ಲೆಬೊನೇನ್‍ಗಳಲ್ಲವರು ಬಂದು
ಸೇರುವುದರಿಂದ
ತುಂಬಿತುಳುಕುವುವು ಆ ನಾಡುಗಳು
ಜನಸ್ತೋಮದಿಂದ.
11 ದಾಟಿಬರುವರವರು ಕಷ್ಟವೆಂಬ ಕಡಲನು
ಭೇದಿಸಿ ಬಿಡುವೆನು ಅಲ್ಲಕಲ್ಲೋಲ
ಸಮುದ್ರವನು.
ತಳದ ತನಕ ಒಣಗಿಹೋಗುವುದು ನೈಲ್
ನದಿಯು
ಕುಗ್ಗಿಹೋಗುವುದು ಅಸ್ಸೀರಿಯಾದ ಗರ್ವವು

ತಪ್ಪಿಹೋಗುವುದು ಈಜಿಪ್ಟಿನ ರಾಜದರ್ಪವು.
12 ಬಲಿಷ್ಠರಾಗುವರಾ ಜನರು ಸರ್ವೇಶ್ವರನಲಿ
ಹೆಚ್ಚಳಪಡುವರು ಆತನ ನಾಮದಲಿ,"
ನುಡಿದಿಹನು ಸರ್ವೇಶ್ವರ ಈ ರೀತಿಯಲಿ.

**ಬಲಿಷ್ಠರ ಪತನ**

**11** ತೆರೆ, ಲೆಬನೋನೇ ನಿನ್ನ
ಪುರದ್ವಾರಗಳನು
ದಹಿಸಿಬಿಡಲಿ ಅಗ್ನಿ ನಿನ್ನ
ದೇವದಾರುಗಳನು !
2 ತುರಾಯಿಮರವೇ, ಗೋಳಾಡು
ಬಿದ್ದುಹೋಗಿದೆ ದೇವದಾರು
ನಾಶವಾಗಿವೆ ಭಾರೀ ಮರಗಳು.
ರೋಧಿಸಲಿ ಬಾಷಾನಿನ ಅಲ್ಲೋನ್
ವೃಕ್ಷಗಳು
ಉರುಳಿವೆ ನುಗ್ಗಲಾಗದಾ ದಟ್ಟವನಗಳು.
3 ಆಹಾ! ಕೇಳಿಬರುತ್ತಿದೆ ಕುರುಬರ ಗೋಳಾಟ
ಬರಡಾಗಿದೆ ಅವರ ಹುಲ್ಲುಗಾವಲ ನೋಟ
ಕೇಳಿರಿ, ಇಗೋ, ಯುವಸಿಂಹಗಳ ಆಕ್ರಂದನ
ಏಕೆನೆ ಪಾಳುಬಿದ್ದಿದೆ ಜೋರ್ಡನಿನ ದಟ್ಟವನ !

**ಇಬ್ಬರು ಕುರುಬರು**

4 ದೇವದಾರು ಸರ್ವೇಶ್ವರ ನನಗೆ ಇಂತೆಂದರು: "ಕೊಯ್ಯುಗರಿಗಳ ಮಂದೆಯನು ಕಾಯಿ. 5ಕೊಂಡು
ಕೊಳ್ಳುವವರು, ಅವುಗಳನ್ನು ಕೊಯ್ದರೂ ನಿರಪರಾಧಿಗಳೆನಿಸಿಕೊಳ್ಳುವರು. ಅವುಗಳನ್ನು ಮಾರುವವರು
'ಸರ್ವೇಶ್ವರಸ್ವಾಮಿಗೆ ಸ್ತೋತ್ರ, ನಾವು ಧನವಂತರಾದೆವು' ಎಂದುಕೊಳ್ಳುವರು. ಆ ಮಂದೆಯ ಕುರುಬರು
ಸಹ ಅವುಗಳಿಗೆ ಕರುಣೆ ತೋರಿಸರು."

6 ಸರ್ವೇಶ್ವರಸ್ವಾಮಿಯ ನುಡಿಯಿದು: "ಈ ಲೋಕನಿವಾಸಿಗಳಿಗೆ ನಾನು ಕರುಣೆತೋರಿಸೆನು.
ಪ್ರತಿಯೊಬ್ಬನನ್ನು ತನ್ನ ತನ್ನ ನೆರೆಯವನ ಕೈಗೋ ಅರಸನ ಕೈಗೂ ಒಪ್ಪಿಸಿಬಿಡುವೆನು. ಆ ಬಲಿಷ್ಠರು
ಲೋಕವನ್ನು ಧ್ವಂಸಮಾಡುವರು. ಅವರ ಕೈಗೆ ಸಿಕ್ಕದವರನ್ನು ನಾನು ರಕ್ಷಿಸೆನು."

7 ಆಗ ನಾನು ಕೊಯ್ಯುಗರಿಗಳನ್ನು ವ್ಯಾಪಾರ ಮಾಡುವವರಿಗೋಸ್ಕರ ಆ ಮಂದೆಗೆ ಕುರಿಗಾಹಿ ಆದೆ.
ಎರಡು ಕುರಿಗೋಲುಗಳನ್ನು ಕೈಗೆ ತೆಗೆದುಕೊಂಡು ಒಂದಕ್ಕೆ 'ಕೃಪೆ' ಎಂದೂ ಮತ್ತೊಂದಕ್ಕೆ "ಐಕ್ಯ' ಎಂದೂ
ಹೆಸರಿಟ್ಟು ಆ ಮಂದೆಯನ್ನು ಮೇಯಿಸಿದೆ. 8ಒಂದೇ ತಿಂಗಳೊಳಗೆ ಮೂವರು ಕುರುಬರನ್ನು ಕೆಲಸದಿಂದ
ತೆಗೆದುಹಾಕಿದೆ. ಅನಂತರ ನನಗೆ ಕುರಿಗಳ ಬಗ್ಗೆ ಅಸಹ್ಯವಾಯಿತು. ಕುರಿಗಳು ಸಹ ನನ್ನ ಬಗ್ಗೆ
ಬೇಸರಗೊಂಡವು. 9ಆಗ ನಾನು: "ಇನ್ನು ಮೇಲೆ ನಾನು ನಿಮ್ಮನ್ನು ಮೇಯಿಸೆನು. ಸಾಯಬೇಕಾದವು
ಸಾಯಲಿ, ಹಾಳಾಗಬೇಕಾದವು ಹಾಳಾಗಿಹೋಗಲಿ, ಉಳಿದವುಗಳು ಒಂದನ್ನೊಂದು ಕಚ್ಚಿ ಕಬಳಿಸಿಬಿಡಲಿ,"
ಎಂದೆ. 10ಬಳಿಕ ಎಲ್ಲ ರಾಷ್ಟ್ರಗಳೊಂದಿಗೆ ನಾನು ಮಾಡಿಕೊಂಡಿದ್ದ ಒಡಂಬಡಿಕೆಯನ್ನು
ರದ್ದುಗೊಳಿಸಬೇಕೆಂದು 'ಕೃಪೆ' ಎಂಬ ಕೋಲನ್ನು ಮುರಿದು ಬಿಟ್ಟೆ. 11ಅಂದೇ ಆ ಒಡಂಬಡಿಕೆ ರದ್ದಾಯಿತು.
ಇದನ್ನು ವೀಕ್ಷಿಸುತ್ತಿದ್ದ ಕೊಯ್ಯುಗರಿಗಳ ವ್ಯಾಪಾರಿಗಳು, ನಾನು ಈಡೇರಿಸಿದ್ದು ದೇವರ ನುಡಿಯನ್ನೇ
ಎಂಬುದಾಗಿ ಗ್ರಹಿಸಿಕೊಂಡರು. 12ಅನಂತರ ನಾನು ಅವರಿಗೆ, "ನಿಮಗೆ ಸರಿದೋರಿದರೆ ನನಗೆ ಸಂಬಳವನ್ನು

ಕೊಡಿ; ಇಲ್ಲವಾದರೆ ಬಿಡಿ,” ಎಂದೆ. ಅವರು ಇವನ ಯೋಗ್ಯತೆ ಇಷ್ಟೇ ಎಂದುಕೊಂಡು ಮೂವತ್ತು ಬೆಳ್ಳಿನಾಣ್ಯಗಳನ್ನು ನನ್ನ ಸಂಬಳಕ್ಕಾಗಿ ಕೊಟ್ಟರು.

13 ಇದನ್ನು ನೋಡಿದ ಸರ್ವೇಶ್ವರ ನನಗೆ: “ಇದನ್ನು ಕಾಣಿಕೆ ಕೋಶದಲ್ಲಿ ಬಿಸಾಡು. ಇದು ತಾನೋ ಅವರು ನನಗೆ ಕೊಡುವಂಥ ಘನವಾದ ಸಂಬಳ!” ಎಂದರು. ಅಂತೆಯೇ ನಾನು ಆ ಮೂವತ್ತು ಬೆಳ್ಳಿನಾಣ್ಯಗಳನ್ನು ತೆಗೆದುಕೊಂಡು ಸರ್ವೇಶ್ವರನ ಆಲಯದ ಕಾಣಿಕೆ ಕೋಶದಲ್ಲಿ ಬಿಸಾಡಿಬಿಟ್ಟೆ.
14ಕೂಡಲೆ ಜುದೇಯ ಮತ್ತು ಇಸ್ರಯೇಲ್ ನಡುವೆ ಇದ್ದ ಸೋದರ ಸಂಬಂಧವನ್ನು ಮುರಿಬೇಕೆಂದು ‘ಐಕ್ಯ’ವೆಂಬ ನನ್ನ ಎರಡನೇ ಕೋಲನ್ನು ಮುರಿದುಬಿಟ್ಟೆ.

15 ಅನಂತರ ಸರ್ವೇಶ್ವರ ನನಗೆ ಹೀಗೆಂದು ಅಪ್ಪಣೆ ಮಾಡಿದರು: “ಮತ್ತೊಮ್ಮೆ ನೀನು ವೇಷ ಧರಿಸಿಕೊಂಡು ಮಂಕು ಕುರುಬನಂತೆ ನಟಿಸು.
16ಏಕೆಂದರೆ ನಾಡಿನಲ್ಲಿ ಒಬ್ಬ ಕುರುಬನು ಏಳುವಂತೆ ನಾನು ಮಾಡುವೆನು. ಅವನು ಅಳಿದು ಹೋದ ಕುರಿಗಳನ್ನು ಗುಣಪಡಿಸನು; ಚದರಿಹೋದ ಕುರಿಗಳನ್ನು ಹುಡುಕಿತರನು; ಉಳಿದವುಗಳನ್ನು ಸಾಕಲಾರನು. ಕೊಬ್ಬಿದ ಕುರಿಗಳನ್ನು ಕಡಿದು, ಅವುಗಳ ಗೊರಸುಗಳನ್ನೂ ಸುಲಿದು ಕಬ್ಬಳಿಸುವನು.

17 ಮಂದೆಕಾಯದ ಕುರುಬನಿಗೆ ಧಿಕ್ಕಾರ!
ತಾಕುವುದು ಅವನ ತೋಳಿಗೂ ಬಲಗಣ್ಣಿಗೂ
ಖಡ್ಗ
ತೀರಾ ಬತ್ತಿಹೋಗಲಿ ಅವನ ತೋಳು
ಪೂರಾ ಮಬ್ಬಾಗಲಿ ಅವನ ಬಲಗಣ್ಣು

**12** ಇಸ್ರಯೇಲಿನ ವಿಷಯವಾಗಿ ಸರ್ವೇಶ್ವರಸ್ವಾಮಿ ನುಡಿದ ದೈವೋಕ್ತಿ: ಆಕಾಶ ಮಂಡಲವನ್ನು ಹರಡಿ, ಭೂಲೋಕಕ್ಕೆ ಅಸ್ತಿಭಾರವನ್ನು ಹಾಕಿ, ಮಾನವನ ಜೀವಾತ್ಮವನ್ನು ಸೃಷ್ಟಿಸುವ ಸರ್ವೇಶ್ವರ ಇಂತೆನ್ನುತ್ತಾರೆ:
2 “ನಾನು ಜೆರುಸಲೇಮನ್ನು ಮದ್ಯದ ಬುಡ್ಡಿಯನ್ನಾಗಿ ಮಾಡುವೆನು. ಅದರ ಸುತ್ತಮುತ್ತಲಿರುವ ರಾಷ್ಟ್ರಗಳು ಆ ಬುಡ್ಡಿಯಿಂದ ಕುಡಿದು ಮತ್ತರಾಗಿ, ಅತ್ತಿತ್ತ ಓಲಾಡುವರು. ಜೆರುಸಲೇಮಿಗೆ ಅವರು ಮುತ್ತಿಗೆ ಹಾಕುವಾಗ ಜುದೇಯವೆಲ್ಲವೂ ಇಕ್ಕಟ್ಟಿಗೆ ಒಳಗಾಗುವುದು.
3ಆ ದಿನದಂದು ಜೆರುಸಲೇಮನ್ನು ಭಾರಿ ಬಂಡೆಯನ್ನಾಗಿ ಮಾಡುವೆನು. ಅದನ್ನು ಎತ್ತಲು ಯತ್ನಿಸುವವರೆಲ್ಲರಿಗೂ ತೀವ್ರ ಗಾಯವಾಗುವುದು. ವಿಶ್ವದ ರಾಷ್ಟ್ರಗಳು ಅದನ್ನು ಎತ್ತಿ ಹಾಕಲು ಕೂಡಿಬರುವುವು.
4ಆಗ ಅವರ ಕುದುರೆಗಳೆಲ್ಲ ತಬ್ಬಿಬ್ಬಾಗುವಂತೆ ಮಾಡುವೆನು. ರಾಹುತರನ್ನು ದಿಗ್ಭ್ರಮೆಗೊಳಿಸುವೆನು. ಜುದೇಯ ಮನೆತನವನ್ನು ಕಟಾಕ್ಷಿಸಿ, ಇತರ ರಾಷ್ಟ್ರಗಳ ಕುದುರೆಗಳನ್ನೆಲ್ಲಾ ಕುರುಡಾಗಿಸುವೆನು.
5ಆಗ ಜುದೇಯದ ನಾಯಕರೆಲ್ಲ ತಮ್ಮತಮ್ಮೊಳಗೇ; ‘ಜೆರುಸಲೇಮಿನ ನಿವಾಸಿಗಳ ಶಕ್ತಿಸಾಮರ್ಥ್ಯ ಸೇನಾಧೀಶ್ವರ ಸರ್ವೇಶ್ವರನಾದ ದೇವರೇ’ ಎಂದುಕೊಳ್ಳುವರು.

6 “ಆ ದಿನದಂದು ಜುದೇಯದ ಕುಲನಾಯಕರನ್ನು ಕಟ್ಟಿಗೆಯ ಮಧ್ಯೆ ಇರುವ ಅಗ್ಗಿಷ್ಟಿಕೆಯನ್ನಾಗಿಯೂ ಸಿವುಡುಗಳ ನಡುವೆ ಉರಿಯುವ ಪಂಜನ್ನಾಗಿಯೂ ಮಾಡುವೆನು. ಅವರು ಸುತ್ತಮುತ್ತಲಿನ ರಾಷ್ಟ್ರಗಳನ್ನು ಎಡಬಲವೆನ್ನದೆ ನಾಶಮಾಡುವರು. ಜೆರುಸಲೇಮಿನ ನಿವಾಸಿಗಳಾದರೋ ತಮ್ಮ ನಗರದಲ್ಲೇ ಸುರಕ್ಷಿತವಾಗಿರುವರು.

7 “ಸರ್ವೇಶ್ವರನಾದ ನಾನು ಜುದೇಯದ ಸೈನ್ಯಗಳು ಮೊದಲು ಜಯಗಳಿಸುವಂತೆ ಮಾಡುವೆನು. ಆಗ ದಾವೀದ ವಂಶದವರ ಹಾಗೂ ಜೆರುಸಲೇಮಿನವರ ಘನತೆ ಗೌರವ ಜುದೇಯದವರ ಘನತೆ ಗೌರವವನ್ನು ಮೀರದು.
8ಅಂದು, ಸರ್ವೇಶ್ವರ ಜೆರುಸಲೇಮಿನ ನಿವಾಸಿಗಳನ್ನು ಕೋಟೆಯಂತೆ ಕಾಪಾಡುವರು. ಈ ಕಾರಣ, ಅವರಲ್ಲಿ ದುರ್ಬಲನು ದಾವೀದನಂತೆ ಬಲಾಢ್ಯನಾಗುವನು. ದಾವೀದನವಂಶ ದೇವದೂತರಂತೆ, ಹೌದು, ದೇವರಂತೆ, ಅವರಿಗೆ ಮುಂದಾಳಾಗುವುದು.
9ಆ ದಿನದಂದು ಜೆರುಸಲೇಮಿನ ಮೇಲೆ ಬೀಳುವ ರಾಷ್ಟ್ರಗಳೆಲ್ಲವನ್ನು ನಾನೇ ಧ್ವಂಸಮಾಡುವೆನು.

10 “ದಾವೀದನ ವಂಶಜರಲ್ಲೂ ಜೆರುಸಲೇಮಿನ ನಿವಾಸಿಗಳ ಮನದಲ್ಲೂ ಕರುಣಿಸುವ ಹಾಗೂ ಪ್ರಾರ್ಥಿಸುವ ಮನೋಭಾವವನ್ನು ಸುರಿಸುವೆನು. ತಾವು ಇರಿದವನನ್ನೇ ಅವರು ಆಗ ದಿಟ್ಟಿಸಿ ನೋಡುವರು.

ಏಕೈಕ ಮಗನನ್ನು ಕಳೆದುಕೊಂಡಂತೆ ಅವನಿಗಾಗಿ ಗೋಳಾಡುವರು. ಕಾಲವಾದ ಜ್ಯೇಷ್ಠ ಪುತ್ರನಿಗಾಗಿ
ಎಂಬಂತೆ ಅತ್ತು ಪ್ರಲಾಪಿಸುವರು. 11ಮೆಗಿದ್ದೋವಿನ ಕಣಿವೆಯಲ್ಲಿ ಆದಂತೆ, ಹದಾದ್-ರೀಮೋನ್‍ನಲ್ಲಿ
ನಡೆದಂತೆ ಜೆರುಸಲೇಮಿನಲ್ಲಿ ಆ ದಿನದಂದು ದೊಡ್ಡ ಗೋಳಾಟವಾಗುವುದು. 12ನಾಡೆಲ್ಲ ಗೋಳಾಡುವುದು,
ಒಂದೊಂದು ಕುಟುಂಬವೂ ಪ್ರತ್ಯೇಕವಾಗಿ ಗೋಳಾಡುವುದು.

"ದಾವೀದ ವಂಶದ ಕುಟುಂಬವೇ ಬೇರೆಯಾಗಿ, ಅದರಲ್ಲಿನ ಗಂಡಸರು ಹೆಂಗಸರು
ಬೇರೆಬೇರೆಯಾಗಿ; ನಾತಾನ ವಂಶದ ಕುಟುಂಬವೇ ಬೇರೆಯಾಗಿ, ಅದರಲ್ಲಿನ ಗಂಡಸರು ಹೆಂಗಸರು ಬೇರೆ
ಬೇರೆಯಾಗಿ; 13ಲೇವಿ ವಂಶದ ಕುಟುಂಬವೇ ಬೇರೆಯಾಗಿ, ಅದರಲ್ಲಿನ ಗಂಡಸರು ಹೆಂಗಸರು ಬೇರೆ
ಬೇರೆಯಾಗಿ; ಶಿಮ್ಮಿಯ ಸಂತಾನದ ಕುಟುಂಬವೇ ಬೇರೆಯಾಗಿ, ಅದರಲ್ಲಿನ ಗಂಡಸರು ಹೆಂಗಸರು ಬೇರೆ
ಬೇರೆಯಾಗಿ; 14ಮಿಕ್ಕ ಕುಟುಂಬಗಳೆಲ್ಲ ಬೇರೆಯಾಗಿ, ಅವುಗಳ ಗಂಡಸರು ಹೆಂಗಸರು ಬೇರೆಬೇರೆಯಾಗಿ;
ಹೀಗೆ ಎಲ್ಲರು ಗೋಳಾಡುವರು ಬೇರೆಬೇರೆಯಾಗಿ."

**13** ಸೇನಾಧೀಶ್ವರ ಸರ್ವೇಶ್ವರ ಹೀಗೆ ಹೇಳುತ್ತಾರೆ: "ಆ ದಿನದಂದು ದಾವೀದ ವಂಶದವರಿಗೆ ಮತ್ತು
ಜೆರುಸಲೇಮಿನವರಿಗೆ ಪಾಪದ ಅಶುದ್ಧತೆಯನ್ನು ಪರಿಹರಿಸಬಲ್ಲ ಒಂದು ಬುಗ್ಗೆ ಕಾಣಿಸಿಕೊಳ್ಳುವುದು.
2ಅಂದು ನಾಡಿನಲ್ಲಿ ವಿಗ್ರಹಗಳು ಹೆಸರಿಲ್ಲದಂತೆ ಮಾಡುವೆನು; ಅಷ್ಟೇ ಅಲ್ಲ, ಅವುಗಳನ್ನು ಯಾರೂ
ನೆನಸಿಕೊಳ್ಳದಂತೆ ಮಾಡುವೆನು; ಅಲ್ಲದೆ ಪ್ರವಾದಿಯೆನಿಸಿಕೊಳ್ಳುವವರನ್ನೂ ಅಶುದ್ಧ ಆತ್ಮವನ್ನೂ ನಾಡಿನಿಂದ
ತೊಲಗಿಸಿಬಿಡುವೆನು. 3ಯಾವನಾದರೂ ಪ್ರವಾದನೆ ಮಾಡಲು ಯತ್ನಿಸಿದರೆ, ಅವನ ತಾಯಿತಂದೆಗಳೇ,
"ಇವನು ಸರ್ವೇಶ್ವರ ಸ್ವಾಮಿಯ ಹೆಸರೆತ್ತಿ ಸುಳ್ಳಾಡುವುದರಿಂದ ಅವನು ಬದುಕಬಾರದು," ಎಂದು
ಹೇಳುವರು. ಅಷ್ಟೇ ಅಲ್ಲ, ಅವನು ಮಾಡಿದ ಪ್ರವಾದನೆಯ ನಿಮಿತ್ತ ಅವರೇ ಅವನನ್ನು ತಿವಿದು
ಕೊಂದುಹಾಕುವರು.

4 "ಆ ದಿನದಲ್ಲಿ ಯಾವ ಪ್ರವಾದಿಯೂ ತನಗಾಗಿರಬಹುದಾದ ದರ್ಶನಗಳನ್ನು ಪ್ರಕಟಿಸಲು
ಹೆಮ್ಮೆಪಡುವುದಿಲ್ಲ. ಪ್ರವಾದಿಯಂತೆ ನಟಿಸುವುದಿಲ್ಲ. ಪ್ರವಾದಿಯ ವೇಷವನ್ನು ಧರಿಸುವುದಿಲ್ಲ. 5ಬದಲಿಗೆ,
ತಾನು ಪ್ರವಾದಿಯಲ್ಲ, ಹೊಲದಲ್ಲಿ ಕೆಲಸಮಾಡುವವನು, ಚಿಕ್ಕಂದಿನಿಂದ ನಾನು ಕೂಲಿಯಾಳು,
ಎಂದುಕೊಳ್ಳುವನು. 6'ನಿನ್ನ ಮೈಮೇಲಿನ ಗಾಯಗಳು ಹೇಗಾದವು?' ಎಂದು ಯಾರಾದರೂ ಕೇಳಿದರೆ,
'ಇವು ಗೆಳೆಯನ ಮನೆಯಲ್ಲಾದ ಗಾಯಗಳು' ಎಂದು ಉತ್ತರಕೊಡುವನು."

### ಕುರಿಗಾಹಿಯ ಮರ್ದನ – ಕುರಿಗಳ ಪಲಾಯನ

7 ಸೇನಾಧೀಶ್ವರ ಸರ್ವೇಶ್ವರ ಇಂತೆನ್ನುತ್ತಾರೆ: "ನನ್ನ ಕುರಿಗಾಹಿಗೆ ವಿರುದ್ಧವಾಗಿ, ನನ್ನಾ
ಸಂಗಡಿಗನಿಗೆದುರಾಗಿ, ಓ ಖಡ್ಗವೇ, ಎಚ್ಚರಗೊಳ್ಳು; ಕೊಲ್ಲು ಕುರಿಗಾಹಿಯನು. ಆಗ ಚದರುವುವು ಕುರಿಗಳು,
ಕೈ ಮಾಡಲಿರುವೆ ಮರಿಗಳ ಮೇಲೂ. 8ಹತರಾಗುವರು ನಾಡಿನ ಮೂರರಲ್ಲೆರಡು ಭಾಗದವರು,
ಮೂರನೆಯ ಭಾಗದವರು ಉಳಿಯುವರಲ್ಲಿ. ಸರ್ವೇಶ್ವರಸ್ವಾಮಿಯ ನುಡಿಯಿದು. 9ಹಾಕುವೆನಾ ಮೂರನೇ
ಭಾಗದವರನ್ನು ಬೆಂಕಿಗೆ, ಶೋಧಿಸುವೆನು ಅವರನ್ನು ಬೆಳ್ಳಿಯ ಹಾಗೆ. ಶುದ್ಧೀಕರಿಸುವೆನು ಬಂಗಾರದ ಹಾಗೆ.
ಕಿವಿಗೊಡುವೆ ನನ್ನ ಹೆಸರೆತ್ತಿ ಪ್ರಾರ್ಥಿಸುವವರಿಗೆ. ಹೇಳುವೆನು, 'ಇವರೇ ನನ್ನ ಪ್ರಜೆ'ಯೆಂದು.
ಹೇಳುವರವರು 'ಸರ್ವೇಶ್ವರನೇ ನಮ್ಮ ದೇವ' ಎಂದು.

### ಜೆರುಸಲೇಮ್ ಮತ್ತು ಇತರ ರಾಷ್ಟ್ರಗಳು

**14** ಇಗೋ, ಸರ್ವೇಶ್ವರ ನೇಮಿಸಿದ ದಿನ ಬರುತ್ತಿದೆ. ಆಗ ಜೆರುಸಲೇಮಿನ ಆಸ್ತಿ ಪಾಸ್ತಿ
ಸೂರೆಯಾಗುವುದು. ಮತ್ತು ಸೂರೆಯಾದದ್ದೆಲ್ಲ ಅವರ ಕಣ್ಮುಂದೆ ಪಾಲುಪಾಲಾಗುವುದು. 2ಜೆರುಸಲೇಮಿಗೆ
ಎದುರಾಗಿ ಹೋರಾಡಲು ಅನ್ಯರಾಷ್ಟ್ರಗಳನ್ನು ಒಂದುಗೂಡಿಸುವೆನು. ಅವು ಆ ನಗರವನ್ನು ಆಕ್ರಮಿಸಿ,
ಮನೆಗಳನ್ನು ಸೂರೆಮಾಡಿ, ಹೆಂಗಸರ ಮೇಲೆ ಅತ್ಯಾಚಾರವೆಸಗುವರು. ಅರ್ಧಕ್ಕೆ ಅರ್ಧ ಜನ
ಸೆರೆಹೋಗುವರು. ಮಿಕ್ಕವರು ಅಲ್ಲೇ ಸುರಕ್ಷಿತವಾಗಿರುವರು. 3ಅನಂತರ ಪೂರ್ವಕಾಲದಲ್ಲಿ ನಡೆದಂತೆ,

ಸರ್ವೇಶ್ವರ ಹೊರಟುಬಂದು ಆ ರಾಷ್ಟ್ರಗಳಿಗೆ ವಿರುದ್ಧವಾಗಿ ಪ್ರತಿಭಟಿಸುವರು. 4ಅವರ ಪಾದಗಳು ಜೆರುಸಲೇಮಿಗೆ ಪೂರ್ವಕ್ಕಿರುವ ಓಲಿವ್ ಗುಡ್ಡದ ಮೇಲೆ ನಿಲ್ಲುವುದು. ಆ ಗುಡ್ಡವು ಇಬ್ಭಾಗವಾಗಿ ಪೂರ್ವಪಶ್ಚಿಮದ ಉದ್ದಕ್ಕೂ ಇನ್ನರ್ಧ ಭಾಗವು ದಕ್ಷಿಣಕ್ಕೂ ಸರಿದುಕೊಳ್ಳುವುದು. 5ನೀವು ಆ ಗುಡ್ಡಗಳ ನಡುವೆ ಉಂಟಾಗುವ ಕಣಿವೆಯ ಮೂಲಕ ಪಲಾಯನಗೈಯುವಿರಿ. ಆ ಕಣಿವೆ ಆಚೆಲಿನವರೆಗೆ ಹಬ್ಬಿರುವುದು. ಜುದೇಯದ ಅರಸನಾದ ಉಜ್ಜೀಯನ ಕಾಲದಲ್ಲಿ ಭೂಕಂಪವಾದಾಗ ನೀವು ಮಾಡಿದಂತೆ ಪಲಾಯನ ಗೈಯುವಿರಿ. ಆಗ ನನ್ನ ದೇವರಾದ ಸರ್ವೇಶ್ವರ ತಮ್ಮ ದೂತರ ಸಮೇತ ಬರುವರು.

6 ಆ ದಿನ ಬಂದಾಗ ಚಳಿಯಾಗಲೀ ಮಂಜಾಗಲೀ ಇರದು. ಕತ್ತಲು ಕವಿಯದು. 7ಹಗಲಿರುಳು ಎನ್ನದೆ ನಿರಂತರವೂ ಬೆಳಕಾಗುವುದು. ಸಂಜೆಯು ಸಹ ಪ್ರಕಾಶಮಯವಾಗಿರುವುದು. ಆದರೆ ಇದು ಯಾವಾಗ ಸಂಭವಿಸುವುದೆಂಬುದು ಸರ್ವೇಶ್ವರ ಸ್ವಾಮಿಗೆ ಮಾತ್ರ ತಿಳಿದಿರುವುದು.

8 ಆ ದಿನ ಬಂದಾಗ ಜೀವಜಲವು ಜೆರುಸಲೇಮಿನಿಂದ ಹರಿಯುವುದು. ಅದರ ಅರ್ಧಭಾಗ ಪೂರ್ವದ ಸಮುದ್ರಕ್ಕೂ ಇನ್ನರ್ಧಭಾಗ ಪಶ್ಚಿಮದ ಸಮುದ್ರಕ್ಕೂ ಹರಿಯುವುದು. ಮಳೆ, ಬೇಸಿಗೆ ಎನ್ನದೆ ಪ್ರವಾಹ ಹರಿಯುತ್ತಲೇ ಇರುವುದು. 9ಆಗ ಸರ್ವೇಶ್ವರ ಜಗಕ್ಕೆಲ್ಲಾ ಅರಸರಾಗಿರುವರು. ಅವರೊಬ್ಬರೇ ದೇವರೆಂದು, ಅವರ ಹೆಸರೊಂದೇ ಸ್ತುತ್ಯಾರ್ಹವೆಂದು ಎಲ್ಲರಿಗೂ ತಿಳಿದಿರುವುದು.

10 ಉತ್ತರದಲ್ಲಿರುವ ಗೆಬದಿಂದ ದಕ್ಷಿಣದಲ್ಲಿರುವ ರಿಮ್ಮೋನಿನವರೆಗೆ ನಾಡೆಲ್ಲ ಸಮತಟ್ಟಾಗಿರುವುದು. ಜೆರುಸಲೇಮ್ ನಗರ ಮಾತ್ರ ಸುತ್ತಮುತ್ತಲಿನ ಪ್ರದೇಶಗಳಿಗಿಂತ ಎತ್ತರವಾಗಿ ನಿಲ್ಲುವುದು. ಒಂದು ಕಡೆ ಬೆನ್ಯಾಮಿನ್ ಬಾಗಿಲಿನಿಂದ ಪೂರ್ವಕಾಲದ ಮೂಲೆಯ ಬಾಗಿಲ ತನಕವೂ ಹನನೇಲಿನ ಗೋಪುರದಿಂದ ಅರಸನ ದ್ರಾಕ್ಷೆಯ ಆಲೆಗಳ ಪರಿಯಂತವೂ ಹರಡಿರುವುದು. 11ಅದರಲ್ಲಿ ಜನರು ಸುರಕ್ಷಿತವಾಗಿ ವಾಸಿಸುವರು. ಇನ್ನು ಶಾಪಕ್ಕೆ ತುತ್ತಾಗದೆ ಜನರು ನೆಮ್ಮದಿಯಾಗಿ ನೆಲೆಗೊಂಡಿರುವರು.

12 ಜೆರುಸಲೇಮಿನ ಮೇಲೆ ಮುತ್ತಿಗೆ ಹಾಕುವ ಸಕಲ ರಾಷ್ಟ್ರಗಳಿಗೂ ಸರ್ವೇಶ್ವರ ಭಯಂಕರ ವ್ಯಾಧಿಯೊಂದು ತಗಲುವಂತೆ ಮಾಡುವರು. ಜೀವದಿಂದಿರುವಾಗಲೇ ಜನರ ದೇಹ ಕೊಳೆತುಹೋಗುವುದು. ಕಣ್ಣು ಗುಣಿಯಲ್ಲೇ ಇಂಗಿಹೋಗುವುದು. ನಾಲಗೆ ಬಾಯಲ್ಲೇ ಬತ್ತಿಹೋಗುವುದು.

13 ಸರ್ವೇಶ್ವರ ಆ ದಿನದಂದು ನಾಡಿನಲ್ಲಿ ಕೋಲಾಹಲವನ್ನೆಬ್ಬಿಸಲು, ಜನರು ಭಯಭೀತಿಗೆ ಒಳಗಾಗುವರು. ಒಬ್ಬರನ್ನೊಬ್ಬರು ತಡೆಹಿಡಿದು ಹೊಡೆದಾಡುವರು. 14ಜುದೇಯವು ಜೆರುಸಲೇಮಿನ ಪರವಾಗಿ ಯುದ್ಧಮಾಡುವುದು. ಸುತ್ತಮುತ್ತಲಿನ ರಾಷ್ಟ್ರಗಳ ಆಸ್ತಿಯನ್ನೆಲ್ಲಾ – ಬೆಳ್ಳಿ ಬಂಗಾರ, ಬಟ್ಟೆಬರೆಗಳನ್ನೆಲ್ಲಾ ರಾಶಿರಾಶಿಯಾಗಿ ದೋಚಿಕೊಳ್ಳಲಾಗುವುದು.

15 ನಾಡಿನ ಜನರಿಗೆ ತಗಲುವಂಥ ವ್ಯಾಧಿಯೇ ಕುದುರೆ, ಹೇಸರಗತ್ತೆ, ಒಂಟೆ, ಕತ್ತೆ ಮುಂತಾದ ಪಾಳೆಯದಲ್ಲಿನ ಎಲ್ಲ ಪಶುಪ್ರಾಣಿಗಳಿಗೂ ತಗಲುವುದು.

16 ಅನಂತರ ಜೆರುಸಲೇಮಿಗೆ ಮುತ್ತಿಗೆ ಹಾಕಿದ ರಾಷ್ಟ್ರಗಳಲ್ಲಿ ಅಳಿದುಳಿದವರೆಲ್ಲರು ಸೇನಾಧೀಶ್ವರ ಸರ್ವೇಶ್ವರಸ್ವಾಮಿಯನ್ನು ರಾಜಾಧಿರಾಜನೆಂದು ಆರಾಧಿಸುವುದಕ್ಕೂ ಪರ್ಣಕುಟೀರಗಳ ಹಬ್ಬವನ್ನು ಆಚರಿಸುವುದಕ್ಕೂ ಪ್ರತಿವರ್ಷ ಅಲ್ಲಿಗೆ ಬರುವರು. 17ಜನಾಂಗಗಳಲ್ಲಿ ಯಾರಾದರೂ ಸೇನಾಧೀಶ್ವರ ಸರ್ವೇಶ್ವರ ಸ್ವಾಮಿಯನ್ನು ರಾಜಾಧಿರಾಜನೆಂದು ಆರಾಧಿಸಲು ಬಾರದೆ ಹೋದರೆ, ಅವರಿಗೆ ಮಳೆಯೇ ಬರದು. 18ಈಜಿಪ್ಟಿನ ಮನೆತನದವರು ಬಾರದೆಹೋದರೆ, ಪರ್ಣಕುಟೀರಗಳ ಹಬ್ಬವನ್ನು ಆಚರಿಸಲು ಬಾರದ ರಾಷ್ಟ್ರಗಳಿಗೆ ಸರ್ವೇಶ್ವರ ವಿಧಿಸುವ ದಂಡನೆ ಅವರಿಗೂ ತಗಲುವುದು. 19ಈಜಿಪ್ಟಿಗೂ ಪರ್ಣಕುಟೀರಗಳ ಹಬ್ಬವನ್ನು ಆಚರಿಸಲು ಬಾರದ ಸಕಲ ರಾಷ್ಟ್ರಗಳಿಗೂ ಸಂಭವಿಸುವ ದಂಡನೆ ಇದೇ.

20 ಆ ದಿನ ಬಂದಾಗ 'ಸರ್ವೇಶ್ವರಸ್ವಾಮಿಗೆ ಸಮರ್ಪಿತ' ಎಂಬ ಲಿಪಿಯು ಕುದುರೆಗಳ ಕತ್ತಿಗೆ ಕಟ್ಟಿರುವ ಗಂಟೆಗಳ ಮೇಲೆ ಕೆತ್ತನೆ ಮಾಡಲಾಗಿರುವುದು. ದೇವಾಲಯದ ಪಾತ್ರೆಗಳೆಲ್ಲವು ಬಲಿಪೀಠದ ಪಾತ್ರೆಗಳಷ್ಟೆ ಪವಿತ್ರವಾಗಿರುವುವು. 21ಜೆರುಸಲೇಮಿನಲ್ಲಿಯೂ ಜುದೇಯದಲ್ಲಿಯೂ ಇರುವ ಸಕಲ ಅಡಿಗೆಪಾತ್ರೆಗಳು ಸರ್ವೇಶ್ವರಸ್ವಾಮಿಗೆ ಸಮರ್ಪಿತವಾಗಿರುವುವು. ಬಲಿಯನ್ನರ್ಪಿಸಲು ಬರುವವರೆಲ್ಲರೂ ಬಲಿಪಶುವಿನ ಮಾಂಸವನ್ನು ಬೇಯಿಸಲು ಆ ಪಾತ್ರೆಗಳನ್ನು ಬಳಸುವರು. ಆ ದಿನ ಬಂದಾಗ ಸೇನಾಧೀಶ್ವರ ಸರ್ವೇಶ್ವರಸ್ವಾಮಿಯ ಆಲಯದಲ್ಲಿ ಯಾವ ವರ್ತಕನೂ ಇರನು.